ಸಂಪಾದಕರು :
ಎಂ.ಎಸ್. ವಿಕಾಸ್

# ಜನತಾ ವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ದಾವಣಗೆರೆ
ಭಾನುವಾರ, ಅಕ್ಟೋಬರ್ 27, 2024

ಸಂಪುಟ : 51 ಸಂಚಿಕೆ : 164 ☎ 08192-254736 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com




# ಮಳೆ ಹಾನಿಗೆ ತಕ್ಷಣ ಪರಿಹಾರ

## ಕ್ರಮ ತೆಗೆದುಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಸಿದ್ದರಾಮಯ್ಯ ಆದೇಶ



ಬೆಂಗಳೂರು, ಅ. 26 - ಕಾವೇರಿ-ಕೃಷ್ಣಾ ಕೊಳ್ಳದ ಜಲಾಶಯ ಗಳು ಭರ್ತಿಯಾಗಿರುವುದ ರಿಂದ ನೀರಾವರಿಗೆ ಸಮರ್ಪಕ ನೀರು ಒದಗಿಸಿ ಎಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿಂಗಾರು ಮಳೆಯಲ್ಲಿ ಉಂಟಾಗಿರುವ ಹಾನಿ ಮತ್ತು ಬೆಳೆ ಪರಿಹಾರಕ್ಕೆ ತಕ್ಷಣ ಕ್ರಮ ಕೈಗೊಳ್ಳಿ ಎಂದು ಜಿಲ್ಲಾಡಳಿತಕ್ಕೆ ಇಂದಿಲ್ಲಿ ಆದೇಶ ಮಾಡಿದ್ದಾರೆ.

ಇತ್ತೀಚೆಗೆ ಬಿದ್ದ ಭಾರೀ ಮಳೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ತಮ್ಮ ಸಹೋದ್ಯೋಗಿಗಳು ಮತ್ತು ಅಧಿಕಾರಿ ಗಳೊಂದಿಗೆ ಗೃಹ ಕಚೇರಿ ಕೃಷ್ಣಾದಲ್ಲಿ ಜಿಲ್ಲಾಧಿಕಾರಿ ಹಾಗೂ ಕಾರ್ಯನಿರ್ವಹಣಾಧಿ ಕಾರಿಗಳ ಜೊತೆ ವಿಡಿಯೋ ಕಾನ್ಫರೆನ್ಸ್ ನಡೆಸಿ, ಕುಡಿಯಲು ಸಾಕಷ್ಟು ನೀರು ಇಟ್ಟುಕೊಂಡು ರೈತರ ಭೂಮಿಗೆ ನೀರು ಹರಿಸಿ ಎಂದರು.

ನಮ್ಮ ಪ್ರಮುಖ ಜಲಾಶಯಗಳ ಒಟ್ಟು ಸಂಗ್ರಹಣಾ ಸಾಮರ್ಥ್ಯ 895.62 ಟಿಎಂಸಿಯಲ್ಲಿ, ಪ್ರಸ್ತುತ 871.26 ಟಿಎಂಸಿ ನೀರು ಸಂಗ್ರಹವಿದೆ, ಕಳೆದ ವರ್ಷ ಇದೇ ಅವಧಿಯಲ್ಲಿ 505.81 ಟಿಎಂಸಿ ಇತ್ತು.

ಮುಂದಿನ ಡಿಸೆಂಬರ್‌ವರೆಗೆ ರಾಜ್ಯದಲ್ಲಿ ಭಾರೀ ಮಳೆ ಬೀಳುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ, ಕೆರೆಗಳನ್ನು ತುಂಬಿಸುವ ಮತ್ತು ಕೃಷಿ (2ನೇ ಪುಟಕ್ಕೆ)

### ಅನಧಿಕೃತ ಕಟ್ಟಡಗಳ ನಿರ್ಮಾಣ ತಡೆಗೆ ಕಠಿಣ ಕಾನೂನು : ಸಿಎಂ

ಬೆಂಗಳೂರು, ಅ. 26 - ಅನಧಿಕೃತ ಬಡಾವಣೆ ಹಾಗೂ ಅಕ್ರಮ ಕಟ್ಟಡಗಳ ನಿರ್ಮಾಣ ತಡೆಯಲು ಕಠಿಣ ಕಾನೂನು ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಪ್ರಕಟಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಬಂಧಪಟ್ಟ ಸ್ಥಳೀಯ ಆಡಳಿತಗಳ ಅನುಮತಿ ಪಡೆಯದೇ ಮತ್ತು ಅಕ್ರಮವಾಗಿ ಕಟ್ಟಡಗಳನ್ನು ನಿರ್ಮಿಸಿ ಸಾಮಾನ್ಯ ಜನರು ಪರಿತಪಿಸುವಂತೆ ಕಟ್ಟಡ ನಿರ್ಮಾಣಗಾರರು ಮಾಡಿದ್ದಾರೆ ಎಂದು ತಿಳಿಸಿದರು.

ಅನುಮತಿ ಪಡೆಯದೇ ಕಟ್ಟಡಗಳನ್ನು ನಿರ್ಮಿಸಿದ್ದರಿಂದ ಕೆಲವೆಡೆ (2ನೇ ಪುಟಕ್ಕೆ)

# ಇರಾನ್ ಸೈನಿಕ ತಾಣಗಳ ಮೇಲೆ ಇಸ್ರೇಲ್ ದಾಳಿ

ಟೆಲ್ ಅವೀವ್, ಅ. 26 - ಇರಾನ್‌ನಲ್ಲಿರುವ ಸೈನಿಕ ತಾಣಗಳ ಮೇಲೆ ಇಸ್ರೇಲ್ ವೈಮಾನಿಕ ದಾಳಿ ನಡೆಸಿದೆ. ಈ ತಿಂಗಳ ಆರಂಭದಲ್ಲಿ ಇರಾನ್ ನಡೆಸಿದ ದಾಳಿಗಾಗಿ ಈ ಪ್ರತೀಕಾರ ಕ್ರಮ ತೆಗೆದುಕೊಳ್ಳಲಾಗಿದೆ.

ಇಸ್ರೇಲ್ ಕಡೆ ಕ್ಷಿಪಣಿ ಸಿಡಿಸುವ ಹಾಗೂ ನೆಲದಿಂದ ಕ್ಷಿಪಣಿ ಸಿಡಿಸುವ ತಾಣಗಳ ಮೇಲೆ ದಾಳಿ ನಡೆಸಿರುವುದಾಗಿ ಸೈನ್ಯ ತಿಳಿಸಿದೆ. ದಾಳಿಯಿಂದ ಕ್ಷಿಪಣಿ ತಾಣಗಳು ಇಲ್ಲವೇ ತೈಲ ಘಟಕಗಳಿಗೆ ಹಾನಿಯಾದ ವರದಿಗಳು ಬಂದಿಲ್ಲ. ದಾಳಿಯಿಂದ ಎಷ್ಟು ಹಾನಿಯಾಗಿದೆ ಎಂಬ ಬಗ್ಗೆ ಇಸ್ರೇಲ್ ಯಾವುದೇ ಹೇಳಿಕೆ ನೀಡಿಲ್ಲ.

**1980ರ ನಂತರ ಮೊದಲ ಬಾರಿಗೆ ಶತ್ರು ದೇಶದ ದಾಳಿ ಎದುರಿಸಿದ ಇರಾನ್**

ಇರಾನ್ ರಾಜಧಾನಿ ತೆಹ್ರಾನ್‌ನಲ್ಲಿ ಸ್ಫೋಟಗಳ ಸದ್ದು ಕೇಳಿಬಂದಿದೆ. ಆದರೆ, ದಾಳಿಯಿಂದ ಆಗಿರುವ ಹಾನಿ ಸೀಮಿತವಾಗಿದೆ ಎಂದು ಇರಾನ್ ಹೇಳಿದೆ. ಈ ದಾಳಿಯಲ್ಲಿ ಇಬ್ಬರು ಸೈನಿಕರು ಸಾವನ್ನಪ್ಪಿರುವುದಾಗಿ ತಿಳಿಸಲಾಗಿದೆ.

ಇರಾನ್‌ನ ಲಾಮ್, ಕುಜೆಸ್ತಾನ್ ಹಾಗೂ ತೆಹ್ರಾನ್ ಪ್ರಾಂತ್ಯಗಳಲ್ಲಿನ ಸೈನಿಕ ನೆಲೆಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ಇರಾನ್ ಸೈನ್ಯ ಹೇಳಿದೆ. ಈ ಬಗ್ಗೆ ಹೆಚ್ಚಿನ ವಿವರ ನೀಡಿಲ್ಲ.

ಇಷ್ಟಾದರೂ ಈ ದಾಳಿಯ ಕಾರಣದಿಂದಾಗಿ ಇಸ್ರೇಲ್ ಹಾಗೂ ಇರಾನ್ ನಡುವಿನ ಸಂಘರ್ಷ ಇನ್ನಷ್ಟು ತೀವ್ರವಾಗಲಿದೆ. ಇರಾನ್ ಬೆಂಬಲಿತ ಹಮಾಸ್ ಹಾಗೂ ಹೆಜ್ಬುಲ್ಲಾ ಸಂಘಟನೆಗಳು ಈಗಾಗಲೇ ಇಸ್ರೇಲ್ ಮೇಲೆ ದಾಳಿ ನಡೆಸುತ್ತಿವೆ. ದಾಳಿ ನಂತರ ಹೇಳಿಕೆ ನೀಡಿರುವ ಇರಾನ್ ವಿದೇಶಾಂಗ ಸಚಿವಾಲಯ, ತನಗೆ ಸ್ವಯಂ ರಕ್ಷಣೆಯ ಅಧಿಕಾರ (4ನೇ ಪುಟಕ್ಕೆ)

## ಕೈಲಾಸ ಸಮಾರಾಧನೆ ಆಹ್ವಾನ ಪತ್ರಿಕೆ


|| ಶ್ರೀ ಕೂಲಹಳ್ಳಿ ಗೋಣಿಬಸಪ್ಪ ಪ್ರಸನ್ನ || || ಶ್ರೀ ಉಚ್ಚಂಗೆಮ್ಮದೇವಿ ಪ್ರಸನ್ನ ||



ದಾವಣಗೆರೆ ತಾ|| ದೊಡ್ಡಬಾತಿ ಗ್ರಾಮದ ವಾಸಿ
**ಶ್ರೀಮತಿ ರೇಣುಕಮ್ಮ**
ಇವರು ಮಾಡುವ ವಿಜ್ಞಾಪನೆಗಳು.
ದಿನಾಂಕ: 23-10-2024ನೇ ಬುಧುವಾರ ಸಂಜೆ 5.00ಕ್ಕೆ ನನ್ನ ಪೂಜ್ಯ ಪತಿಯವರಾದ
**ಶ್ರೀ ಬ್ಯಾಡರ ಕೃಷ್ಣಪ್ಪನವರು**
ದೊಡ್ಡಬಾತಿ ಗ್ರಾಮದ ಹಾಲು ಉತ್ಪಾದಕರ ಸಂಘದ ನಿರ್ದೇಶಕರು,
ದಾವಣಗೆರೆ ತಾ|| ವ್ಯವಸಾಯೋತ್ಪನ್ನಗಳ ಮಾರಾಟ ಸಹಕಾರ ಸಂಘದ ಉಪಾಧ್ಯಕ್ಷರು ಮತ್ತು ಕನ್ನಡ ಪರ ಸಂಘಟನೆಯ ಸಕ್ರಿಯ ಪದಾಧಿಕಾರಿಗಳು, ಸಾಹಿತಿಗಳು ಇವರು ದೈವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ
**'ಕೈಲಾಸ ಸಮಾರಾಧನೆ'ಯನ್ನು**
ದಿನಾಂಕ: 27-10-2024ನೇ ಭಾನುವಾರ ಬೆಳಗ್ಗೆ 11.30 ಗಂಟೆಗೆ ದಾವಣಗೆರೆ ತಾ|| ದೊಡ್ಡಬಾತಿ ಗ್ರಾಮದ ಮೃತರ ಸ್ವಗೃಹದಲ್ಲಿ ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು : ಶ್ರೀಮತಿ ರೇಣುಕಮ್ಮ ಹಾಗೂ ಮೃತರ ಸಹೋದರಿಯರು, ಅಳಿಯಂದಿರು, ಮಾವಂದಿರು, ಮಕ್ಕಳು, ಮೊಮ್ಮಕ್ಕಳು ಮತ್ತು ಬಂಧು-ಮಿತ್ರರು.

ವಿ.ಸೂ.: ಆಹ್ವಾನ ಪತ್ರಿಕೆ ತಲುಪದೇ ಇದ್ದವರು ಇದನ್ನೇ ವೈಯಕ್ತಿಕ ಆಹ್ವಾನವೆಂದು ತಿಳಿದು ಆಗಮಿಸಬೇಕಾಗಿ ವಿನಂತಿ.




# ಹಸಿರು ಪಟಾಕಿಗಳಿಗೆ ಮಾತ್ರ ಅವಕಾಶ

ಬೆಂಗಳೂರು, ಅ. 26 - ದೀಪಾವಳಿ ಸಂದರ್ಭದಲ್ಲಿ ಪರಿಸರಕ್ಕೆ ಹಾನಿಯಾಗುವ ಪಟಾಕಿಗಳನ್ನು ನಿಷೇಧಿ ಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಆದೇಶ ಮಾಡಿದ್ದಾರೆ.

ಮಳೆಯಿಂದ ಉಂಟಾದ ಹಾನಿ ಕುರಿತು ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂ ದಿಗೆ ನಡೆಸಿದ ವಿಡಿಯೊ ಕಾನ್ಫರೆನ್ಸ್‌ನ ಲ್ಲಿ ಹಸಿರು ಪಟಾಕಿಗಳಿಗೆ ಮಾತ್ರ ಅವಕಾಶ ನೀಡಿ ಎಂದು ಜಿಲ್ಲಾ ಡಳಿತಗಳಿಗೆ (4ನೇ ಪುಟಕ್ಕೆ)

# ಮಧ್ಯಪ್ರದೇಶದಲ್ಲಿ ತುಂಡಾದ ರೈಲು

ಭೂಪಾಲ್, ಅ. 26 - ಕಲ್ಲಿದ್ದಲು ಸಾಗಿಸುತ್ತಿದ್ದ ಸರಕು ಸಾಗಣೆ ರೈಲೊಂದು ತುಂಡರಿಸಿ ರೈಲು ಎರಡು ಭಾಗವಾದ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಪಶ್ಚಿಮ ಮಧ್ಯ ರೈಲ್ವೆಯ ಜಬಲ್ಪುರ ವಿಭಾಗ ದಲ್ಲಿ ಕತ್ನಿ ಹಾಗೂ ಬಿನಾ ನಿಲ್ದಾಣಗಳ ನಡುವೆ ಈ ಘಟನೆ ಸಂಭವಿಸಿದೆ. ಈ ಘಟನೆಯಿಂದ ಸಂಚಾರಕ್ಕೆ ಯಾವುದೇ ತೊಂದರೆಯಾಗಿಲ್ಲ. ಸಮಸ್ಯೆ ಬಗೆಹರಿಸಲಾಗಿದ್ದು, ರೈಲು ತನ್ನ ಸಂಚಾರ ಮುಂದುವರೆಸಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

ನಮ್ಮ ಕಕ್ಷಿದಾರರಾದ ಶ್ರೀಮತಿ ಸುಜಲಾ ಎಂ. ಕನ್ನಾಲಿಗೆ ಹಾಗೂ ಇತರರು ಶ್ರೀಯುತರಾದ ತಿಮ್ಮಾರೆಡ್ಡಿ, ಪ್ರಭಾಕರ ರೆಡ್ಡಿ ಹಾಗೂ ಇತರರ ವಿರುದ್ಧ ಪಾಲುವಿಭಾಗದ ದಾವೆ ಸಂಖ್ಯೆ OS 301/2024 ಎರಡನೇ ಹಿರಿಯ ಸಿವಿಲ್ ಜಡ್ಜ್‌ರವರ ನ್ಯಾಯಾಲಯದಲ್ಲಿ ಹೂಡಿದ್ದು, ಸದರಿ ದಾವೆಯಲ್ಲಿ ಶ್ರೀಯುತರಾದ ಪ್ರಭಾಕರ ರೆಡ್ಡಿ, ಗೋವಿಂದಪ್ಪ ಹಾಗೂ ತಿಮ್ಮಾರೆಡ್ಡಿ ಇವರುಗಳ ವಿರುದ್ಧ ದಾವೆ ಆಸ್ತಿಗಳನ್ನು ಪರಭಾರೆ ಮಾಡಬಾರದು ಎಂದು ನ್ಯಾಯಾಲಯದಿಂದ ತಾತ್ಕಾಲಿಕ ಪ್ರತಿಬಂಧಕಾಜ್ಞೆ ಆಗಿರುತ್ತದೆ. ಈ ದಾವೆಯ ಮುಂದಿನ ಮುದ್ದತ್ತು ದಿನಾಂಕ: 29-10-2024 ರಂದು ನ್ಯಾಯಾಲಯ ನಿಗದಿಪಡಿಸಿರುತ್ತದೆ.


ದಾವೆ ಆಸ್ತಿಗಳಲ್ಲಿ ಅನೇಕ ಆಸ್ತಿಗಳ ನಾಗಲಮಡಿಕೆ, ಪಾವಗಡ ತಾಲ್ಲೂಕಿನ ಆಸ್ತಿಗಳಿದ್ದು, ಅನೇಕ ಆಸ್ತಿಗಳು ದಾವಣಗೆರೆ ನಗರಕ್ಕೆ ಸೇರಿದ್ದಾಗಿರುತ್ತದೆ. ಸದರಿ ಆಸ್ತಿಗಳಲ್ಲಿ ಈ ಪ್ರಕಟಣೆಯಲ್ಲಿ ದಾವಣಗೆರೆ ನಗರದ್ದು ಮಾತ್ರ ತೋರಿಸಿರುತ್ತೇವೆ.

1. ಸೈಟ್ ನಂ. 598, ಡೋರ್ ನಂ.3071 - ಎಂ.ಸಿ.ಸಿ. 'ಬಿ' ಬ್ಲಾಕ್‌ನಲ್ಲಿರುವ 60x44 ರಲ್ಲಿಯ ಮನೆ.
2. ನೂತನ್ ಕಾಲೇಜು ರೋಡ್‌ನಲ್ಲಿ ಇರುವ ಸೈಟ್ ನಂ.10, ಡೋರ್ ನಂ.1832/10 ರಲ್ಲಿ $\frac{40+50}{2}$x60 ರಲ್ಲಿಯ ಜಾಗ ಮತ್ತು
   ಡೋರ್ ನಂ.1832/10 ರಲ್ಲಿ $\frac{23+6.9}{2} \times \frac{63+61}{2}$ ರಲ್ಲಿಯ ಜಾಗ.
3. ಶಾಮನೂರು ಗ್ರಾಮದ ಸರ್ವೆ ನಂ.260/1A1A 2-5 ರ $\frac{49.60+34.50}{2}$ x 16 ಮೀಟರ್ ಉಳ್ಳ ಜಾಗ.

ಸಹಿ/- ಹೆಚ್. ವಿ. ರಾಮದಾಸ್ ಬಿ.ಕಾಂ.,ಎಲ್.ಎಲ್.ಬಿ.,
ವಕೀಲರು
'ಸದ್ಗುರು', ನಂ.64, 2ನೇ ಮೇನ್ ರಸ್ತೆ,
ಪಿ.ಜೆ. ಬಡಾವಣೆ, ದಾವಣಗೆರೆ - 577 002.

## ಭದ್ರಾ ಜಲಾಶಯ

ನೀರಿನ ಮಟ್ಟ : 186 ಅಡಿ
ಒಳ ಹರಿವು : 3886 ಕ್ಯೂಸೆಕ್ಸ್,
ಹೊರ ಹರಿವು : 3886 ಕ್ಯೂಸೆಕ್ಸ್
ಕಳೆದ ವರ್ಷ : 155' 8 ಅಡಿ



# ಅಸಮಾನತೆ ತೊಲಗಲು ಕಾನೂನು ಅರಿವು ಅಗತ್ಯ

## 'ಅಂತರರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ'ಯಲ್ಲಿ ರಾಮನಗೌಡ ಪಾಟೀಲ್



**ಹರಪನಹಳ್ಳಿ**

ಹರಪನಹಳ್ಳಿ, ಆ.26- ದೇಶದಲ್ಲಿ ಅಸಮಾನತೆಯನ್ನು ತೊಲಗಿಸಲು ಕಾನೂನು ಅರಿವು ಅಗತ್ಯ ಎಂದು ವಕೀಲರ ಸಂಘದ ಅಧ್ಯಕ್ಷ ರಾಮನಗೌಡ ಪಾಟೀಲ್ ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಅಂತರರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಲಿಂಗಭ್ರೂಣ ಹತ್ಯೆ ಕಾನೂನಿಗೆ ವಿರುದ್ದ, ಘಟನೆಗೆ ಆಸ್ಪದ ನೀಡಬಾರದು. ಹೆಣ್ಣು ಮಕ್ಕಳಿಗೆ ಸಮಾನತೆ ಸಾಧಿಸಲು ಅಂತರರಾಷ್ಟ್ರೀಯ ಮಟ್ಟದಲ್ಲಿ ಅನೇಕ ಕಾರ್ಯಗಳನ್ನು ಸರ್ಕಾರ ಮಟ್ಟದಲ್ಲಿ ಅವಕಾಶ ನೀಡಲಾಗಿದೆ. ಅಂತಹ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ಸಂಗಪ್ಪನವರ್ ಮಾತನಾಡಿ, ತೊಟ್ಟಿಲನ್ನು ತೂಗುವ ಕೈ ಜಗತ್ತನ್ನು ತೂಗುತ್ತದೆ, ಸ್ವಾತಂತ್ರ್ಯ ಪೂರ್ವದಲ್ಲಿ ಹೆಣ್ಣುಮಕ್ಕಳು ಅನೇಕ ಸಂಕಷ್ಟಗಳಿಂದ ಬದುಕುತ್ತಿದ್ದರು. ಆದರೆ ದೇಶಕ್ಕೆ ಸ್ವಾತಂತ್ರ್ಯ ಬಂದಾಗಿನಿಂದ ಹೆಣ್ಣು ಮಕ್ಕಳಿಗೆ ಅಭಿವ್ಯಕ್ತಿ ಸ್ವಾತಂತ್ರ್ಯ ಸಿಕ್ಕಂತಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಅರ್ಜುನ್ ಪರಸಪ್ಪ ಹೆಚ್. ಮಾತನಾಡಿ, ನಾವು ಅಂಬೇಡ್ಕರ್ ಅನುಯಾಯಿಗಳಾಗಿ, ನಮ್ಮ ಹಕ್ಕು ಮತ್ತು ಕರ್ತವ್ಯವನ್ನು ಚಾಚೂ ತಪ್ಪದೇ ಪಾಲಿಸಬೇಕಾಗುತ್ತದೆ. ವಿದ್ಯೆಯನ್ನು ಜೀವನಪರ್ಯಂತ ಕಲಿತರೂ ಸಾಲದು, ಹೆಚ್ಚಿನ ಶಿಕ್ಷಣದಿಂದ ನಮ್ಮ ಬೆಳವಣಿಗೆ ಹಂತವನ್ನು ಹೆಚ್ಚಿಸಬೇಕಾಗುತ್ತದೆ ಎಂದರು.

ಪ್ಯಾನೆಲ್ ವಕೀಲ ಎಂ.ಮೃತ್ಯುಂಜಯ ಮಾತನಾಡಿ, ಭ್ರೂಣ ಹತ್ಯೆ ಮಾಡುವುದು ಕಾನೂನು ಬಾಹಿರ. ಇಂತಹ ಕಾರ್ಯವನ್ನು ಯಾರೂ ಮಾಡಬಾರದು ಎಂದರು.

ಪ್ಯಾನಲ್ ವಕೀಲ ಕೆ.ಸಣ್ಣನಿಂಗಗೌಡ, ಮಾತನಾಡಿ, ಮಕ್ಕಳ ರಕ್ಷಣೆಗಾಗಿ ಭ್ರೂಣ ಪತ್ತೆ ಎಂಬ ಯಂತ್ರವನ್ನು ಜಾರಿಗೆ ತಂದರು. ಆ ಅನಿಷ್ಟ ಪದ್ದತಿಯಿಂದ ದೂರವಿರಬೇಕು ಎಂದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಕಾರ್ಯದರ್ಶಿ ಕೇಶವಮೂರ್ತಿ, ಶಿಕ್ಷಕಿ ನಿರ್ಮಲಕುಮಾರಿ, ಡಿ.ಹನುಮಂತಪ್ಪ, ನಳಿನಕುಮಾರಿ, ಬಿ. ತಿಪ್ಪೇಶ್, ಶಿಕ್ಷಕ ಸಿ. ಗಂಗಾಧರ, ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯರಾದ ಕೊಟ್ರೇಶ್, ಬಸವರಾಜ ಸೇರಿದಂತೆ ಉಭಯ ನ್ಯಾಯಾಲಯದ ನ್ಯಾಯಾಧೀಶರು ಹಾಜರಿದ್ದರು.

# ಬಿಜೆಪಿ ಸರ್ಕಾರದ ಅಭಿವೃದ್ಧಿ ಕಾರ್ಯಗಳಿಂದ ಉಪಚುನಾವಣೆಯಲ್ಲಿ ಗೆಲುವು ಖಚಿತ : ವಿಜಯೇಂದ್ರ



ಕೊಟ್ಟೂರು, ಅ.26- ಸಂಡೂರು ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಂಗಾರು ಹನುಮಂತು ನಾಮಪತ್ರ ಸಲ್ಲಿಕೆಯ ಹಿನ್ನೆಲೆಯಲ್ಲಿ ಶುಕ್ರವಾರ ತಾಲ್ಲೂಕಿನ ಉಜ್ಜಯಿನಿ ಸದ್ಧರ್ಮ ಪೀಠದ ಶ್ರೀ ಮರುಳಸಿದ್ದೇಶ್ವರ ಸ್ವಾಮಿ ದರ್ಶನಕ್ಕೆ ಆಗಮಿಸಿದ ವೇಳೆ ಶ್ರೀ ಸ್ವಾಮಿಯ ದರ್ಶನ ಪಡೆದು ನಂತರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸುದ್ದಿಗಾರರೊಂದಿಗೆ ಮಾತನಾಡಿದರು.

ಬಿಜೆಪಿ ಅಭ್ಯರ್ಥಿ ಸಂಡೂರು ಬಂಗಾರಿ ಹನುಮಂತು ಮತ್ತು ಶಿಗ್ಗಾಂವಿ ಅಭ್ಯರ್ಥಿ ಭರತ್ ಬೊಮ್ಮಾಯಿ ಹಾಗೂ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಗೆಲುವು ಖಚಿತ ಎಂದರು.

ಉಪಚುನಾವಣೆ ಪ್ರಾರಂಭವಾಗಿರುವ ಕ್ಷೇತ್ರದಲ್ಲಿ ಹಿಂದೆ ಬಿಜೆಪಿ ಸರ್ಕಾರದಿಂದ ನಡೆದ ಅಭಿವೃದ್ಧಿ ಕಾರ್ಯಗಳನ್ನು ಹಾಗೂ ಪ್ರಸ್ತುತ ಸರ್ಕಾರದ ಅಭಿವೃದ್ಧಿ ಕಾರ್ಯಗ ಳನ್ನು ಕ್ಷೇತ್ರದ ಜನರು ಅವಲೋಕಿಸಿದ್ದಾರೆ. ಹಿಂದೆ ನಮ್ಮ ಸರ್ಕಾರದ ಅಭಿವೃದ್ಧಿಗಳೇ ಈ ಬಾರಿ ನಮ್ಮ ಅಭ್ಯರ್ಥಿಗಳ ಗೆಲುವಿಗೆ ಶ್ರೀರಕ್ಷೆಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಯೋಗೀಶ್ವರ್ ಅವರಿಗೆ ಬಿಜೆಪಿ ಎಲ್ಲಾ ಸೌಲಭ್ಯ ಕೊಟ್ಟರೂ ಇಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಕಾಂಗ್ರೆಸ್ ಪಕ್ಷ ಸೇರಿದ್ದಾರೆ. ಅವರಿಗೆ ನಾನು ಎಲ್ಲೇ ಹೋದ್ರು ಗೆಲ್ಲುವೆ ಎಂಬ ಭ್ರಮೆಯಲ್ಲಿದ್ದಾರೆ. ಇದಕ್ಕೆ ಕ್ಷೇತ್ರದ ಜನರು ಈ ಬಾರಿ ಸರಿಯಾಗಿ ಉತ್ತರ ನೀಡಲಿದ್ದಾರೆ ಎಂದು ಹೇಳಿದರು.

ಉಜ್ಜಯಿನಿ ಜಗದ್ಗುರು ಶ್ರೀ ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳಿಂದ ಬಿ.ವೈ.ವಿಜಯೇಂದ್ರ, ಮಾಜಿ ಸಚಿವರುಗಳಾದ ಶ್ರೀರಾಮುಲು, ಎಂ.ಪಿ. ರೇಣುಕಾಚಾರ್ಯ ಹಾಗೂ ಮಾಡಾಳ್ ಮಲ್ಲಿಕಾರ್ಜುನ ಅವರು ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಚನ್ನಬಸನಗೌಡ್ರು, ಮಾಜಿ ಮೇಯರ್ ಅಜಯ್ ಕುಮಾರ್, ಉಜ್ಜಯಿನಿ ಸದ್ಧರ್ಮ ಪೀಠದ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಂ.ಎಂ.ಜೆ. ಹರ್ಷವರ್ಧನ್, ಮಂಡಳ ಉಪಾಧ್ಯಕ್ಷ ಅಂಗಡಿ ಪಂಪಾಪತಿ, ಪ.ಪಂ. ಉಪಾಧ್ಯಕ್ಷ ಜಿ. ಸಿದ್ದಯ್ಯ, ಕಾರ್ಯಕರ್ತ ಸಿ. ಶಿವಪ್ರಕಾಶ್, ಯುವ ಮುಖಂಡರು ಎಂಎಂಜೆ ಶೋಭಿತ್, ದಾವಣಗೆರೆಯ ಧನಂಜಯ ಕಡ್ಲೇಬಾಳ್ ಮತ್ತಿತರರಿದ್ದರು.

## ಕರ್ನಾಟಕ ರಾಜ್ಯ ಕ್ರಿಕೆಟ್ ತಂಡಕ್ಕೆ ಡಿ.ಎಂ.ಭುವನ್ ಕುಮಾರ್ ಆಯ್ಕೆ



ದಾವಣಗೆರೆ, ಅ. 26- ಹರಿಯಾಣದ ಸೋನಿಪತ್‌ನಲ್ಲಿ ಕಳೆದ ವಾರ ನಡೆದ 19 ವರ್ಷದೊಳಗಿನ ರಾಷ್ಟ್ರೀಯ ಮಟ್ಟದ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವ ಳಿಯಲ್ಲಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿದ ಮತ್ತು ನಗರದ ಶ್ರೀ ಚೈತನ್ಯ ಪಿಯು ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿ ಡಿ.ಎಂ.ಭುವನ್ ಕುಮಾರ್ ಕರ್ನಾಟಕ ರಾಜ್ಯ ತಂಡಕ್ಕೆ ಆಯ್ಕೆಯಾಗಿದ್ದಾರೆ.

ಭುವನ್ ಕುಮಾರ್, ಪವನ ವಿದ್ಯುತ್ ಸುಜಲಾನ್ ಕಂಪನಿಯ ಇಂಜಿನಿಯರ್ ಡಿ.ವಿ. ಮಂಜುನಾಥ್ ಮತ್ತು ಪಿ. ಆರ್. ಚಂದ್ರಕಲಾ ದಂಪತಿ ಪುತ್ರ. ತಂಡದ ಕೋಚ್ ವಿ. ಚನ್ನಯ್ಯ ಅವರು ತರಬೇತುದಾರರಾಗಿದ್ದಾರೆ.

## ರಾಜ್ಯ ಮಹಿಳಾ ಗೋಷ್ಠಿಗೆ ಕವಯತ್ರಿ ವೀಣಾ, ಮಂಜುಳಾ





ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಕರ್ನಾಟಕ ವತಿಯಿಂದ ಧರ್ಮಸ್ಥಳದ ನೇತ್ರಾವತಿ ಸ್ನಾನ ಘಟ್ಟದ ಸಮೀಪದ ಸೂರ್ಯಕಮಲ ಸಭಾಭವನ ದಲ್ಲಿ ಇಂದು ಸಂಜೆ ಹಮ್ಮಿಕೊಂಡಿರುವ ರಾಜ್ಯ ಮಹಿಳಾ ಗೋಷ್ಠಿ ಕಾರ್ಯಕ್ರಮದಲ್ಲಿ ದಾವಣಗೆರೆಯ ಹಿರಿಯ ಕವಯತ್ರಿ ಶ್ರೀಮತಿ ವೀಣಾ ಕೃಷ್ಣಮೂರ್ತಿ ಹಾಗೂ ಕವಿಯತ್ರಿ - ಶಿಕ್ಷಕಿ ಮಂಜುಳಾ ಪ್ರಸಾದ್ ಅವರುಗಳು ಭಾಗವಹಿಸಲಿದ್ದಾರೆ.

# ಮಳೆ ಹಾನಿಗೆ ತಕ್ಷಣ ಪರಿಹಾರ

(1ನೇ ಪುಟದಿಂದ) ಹಾಗೂ ವಿದ್ಯುತ್ ಉತ್ಪಾದನೆಗೆ ನೀರನ್ನು ಸಮರ್ಪಕ ಬಳಕೆ ಮಾಡಿಕೊಳ್ಳಿ ಎಂದು ಸೂಚನೆ ನೀಡಿದ್ದಾರೆ.

ಅತಿವೃಷ್ಟಿ ಹಾಗೂ ಪ್ರವಾಹದಿಂದ ಆಗಿರುವ ಹಾನಿಗೆ ಪರಿಹಾರ ನೀಡಿ, ಜಿಲ್ಲಾಧಿಕಾರಿಗಳು ಹಾನಿಗೀಡಾದ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ನಿಯಮಾವಳಿ ಪ್ರಕಾರ ತಕ್ಷಣ ಪರಿಹಾರ ಒದಗಿಸಿ, ಜನರಿಗೆ ಸಾಂತ್ವನ ನೀಡಿ ಎಂದಿದ್ದಾರೆ.

ಮನೆ ಹಾನಿ ಮತ್ತು ಪ್ರಾಣ ಹಾನಿ ಪ್ರಕರಣಗಳಲ್ಲಿ 48 ಗಂಟೆಗಳ ಒಳಗೆ ಪರಿಹಾರ ಒದಗಿಸಬೇಕು. ಹಿಂಗಾರಿನಲ್ಲಿ ಅತಿವೃಷ್ಟಿ ಯಿಂದಾಗಿ ಒಟ್ಟು 25 ಸಾವುಗಳು ಸಂಭವಿಸಿವೆ. ಅತಿವೃಷ್ಟಿಯಿಂದಾಗಿ 19 ದೊಡ್ಡ ಜಾನುವಾರುಗಳು, 66 ಸಣ್ಣ ಜಾನುವಾರುಗಳು ಸಾವಿಗೀಡಾಗಿವೆ. ಎಸ್‌ಡಿಆರ್‌ಎಫ್ ನಿಯಮಾನುಸಾರ ದೊಡ್ಡ ಜಾನುವಾರುಗಳಿಗೆ ಒಟ್ಟು 6.84 ಲಕ್ಷ ರೂ., ಸಣ್ಣ ಜಾನುವಾರುಗಳಿಗೆ ಒಟ್ಟು 2.8 ಲಕ್ಷ ರೂ. ಸೇರಿದಂತೆ ಒಟ್ಟು 9.6 ಲಕ್ಷ ರೂ. ತುರ್ತು ಪರಿಹಾರ ಪಾವತಿಸಲಾಗಿದೆ.

ಅಧಿಕ ಮಳೆಯಿಂದಾಗಿ 84 ಮನೆಗಳು ಸಂಪೂರ್ಣ ಹಾನಿಗೀಡಾಗಿವೆ, 2077 ಮನೆಗಳು ಭಾಗಶಃ ಹಾನಿಗೀಡಾಗಿವೆ. ಪೂರ್ತಿ ಮನೆ ಹಾನಿಗೆ 1.20 ಲಕ್ಷ ರೂ. ಹಾಗೂ ಭಾಗಶಃ ಹಾನಿಗೀಡಾದ ಮನೆಗಳಿಗೆ ಮುಂಗಾರು ಹಂಗಾಮಿನಲ್ಲಿ ಸೂಚಿಸಿರುವಂತೆ 50,000 ರೂ. ಪರಿಹಾರ ನೀಡಲು ಆದೇಶಿಸಲಾಗಿದೆ.

ಬೆಳೆ ಹಾನಿ ಕುರಿತು ಜಂಟಿ ಸಮೀಕ್ಷೆ ನಡೆಯುತ್ತಿದೆ. ಒಂದು ವಾರದೊಳಗೆ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಸಿದ್ದರಾಮಯ್ಯ ಸೂಚನೆ ನೀಡಿದರು. ಅತಿವೃಷ್ಟಿ ಪರಿಹಾರ ಕಾರ್ಯಗಳಿಗೆ ಸಾಕಷ್ಟು ಅನುದಾನ ಲಭ್ಯವಿದೆ, ಜಿಲ್ಲಾಧಿಕಾರಿಗಳ ಖಾತೆಯಲ್ಲಿ 551.25 ಕೋಟಿ ರೂ. ಹಾಗೂ ತಹಶೀಲ್ದಾರ್ ಖಾತೆಯಲ್ಲಿ 115.71 ಕೋಟಿ ರೂ. ಸೇರಿದಂತೆ ಒಟ್ಟು 666.96 ಕೋಟಿ ರೂ. ಲಭ್ಯವಿದ್ದು ಸಮರ್ಪಕ ಬಳಕೆ ಮಾಡುವಂತೆ ಸೂಚಿಸಿದರು.

ಕೆರೆಗಳ ಒತ್ತುವರಿ ತೆರವುಗೊಳಿಸಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಗಡುವು ವಿಧಿಸಲಾಗಿತ್ತು. ಬೆಂಗಳೂರು ಸುತ್ತಮುತ್ತ ಬಹುತೇಕ ಕೆರೆಗಳು ಕೇವಲ ಶೇ.30ರಷ್ಟು ಮಾತ್ರ ತುಂಬಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಕೈಗೊಳ್ಳಬೇಕು ಎಂದೂ ಸಿದ್ದರಾಮಯ್ಯ ಇದೇ ಸಂದರ್ಭದಲ್ಲಿ ಹೇಳಿದರು.

ಕೆರೆಗಳ ಒತ್ತುವರಿ ತೆರವುಗೊಳಿಸಿ, ಹೂಳೆತ್ತುವುದು ಸೇರಿದಂತೆ ಅಭಿವೃದ್ಧಿ ಕಾರ್ಯಗಳನ್ನು ಆದ್ಯತೆ ಮೇರೆಗೆ ಕೈಗೊಳ್ಳಬೇಕು, ಇದಕ್ಕಾಗಿ ಉದ್ಯೋಗ ಖಾತ್ರಿ ಯೋಜನೆಯನ್ನು ಸಮರ್ಪಕ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

### ಅನಧಿಕೃತ ಕಟ್ಟಡಗಳ ನಿರ್ಮಾಣ ತಡೆಗೆ ಕಠಿಣ ಕಾನೂನು : ಸಿಎಂ

**(1ನೇ ಪುಟದಿಂದ) ಕಟ್ಟಡಗಳು ಉರುಳಿ ಸಾವು-ನೋವು ಸಂಭವಿಸಿದೆ. ಹಿಂದೆ ಇದ್ದ ಬಿಗಿ ಕ್ರಮಗಳನ್ನು ಸರ್ಕಾರಗಳು ಸಡಿಲಗೊಳಿಸಿದ್ದರಿಂದ ಅನಧಿಕೃತ ಕಟ್ಟಡಗಳು ಮತ್ತು ಬಡಾವಣೆಗಳು ತಲೆ ಎತ್ತಿವೆ. ಇದಕ್ಕೆ ಕಡಿವಾಣ ಹಾಕಲು ಮುಂಬರುವ ಸಂಪುಟ ಸಭೆಯಲ್ಲೇ ಕಾನೂನು ರೂಪಿಸಿ ಸ್ಥಳೀಯ ಸಂಸ್ಥೆ ಮತ್ತು ಪೊಲೀಸರಿಗೆ ಅಧಿಕಾರ ನೀಡಲಾಗುವುದು ಎಂದು ಹೇಳಿದರು.**

# ಹರಪನಹಳ್ಳಿಯಲ್ಲಿ ಇಂದು ನುಡಿ ನಮನ ಕಾರ್ಯಕ್ರಮ



ಹರಪನಹಳ್ಳಿ, ಅ. 26 - ಸಮಾಜ ಸೇವಕ ಹಾಗೂ ವಾಲ್ಮೀಕಿ ನಾಯಕ ಸಮಾಜದ ಮುಖಂಡ ಕಬ್ಬಳ್ಳಿ ಎಂ. ಬಸವರಾಜ ಅವರು ಅನಾರೋಗ್ಯದಿಂದ ನಿಧನರಾದ ಹಿನ್ನೆಲೆಯಲ್ಲಿ ಅವರಿಗೆ ಶ್ರದ್ಧಾಂಜಲಿ ಹಾಗೂ ನುಡಿ ನಮನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವಾಲ್ಮೀಕಿ ನಾಯಕ ಸಮಾಜದ ತಾಲ್ಲೂಕು ಅಧ್ಯಕ್ಷ ಅರಸಿಕೆರೆಯ ವೈ.ಡಿ. ಅಣ್ಣಪ್ಪ ತಿಳಿಸಿದರು.

ತಾಲ್ಲೂಕಿನ ಅರಸಿಕೆರೆಯ ಕೋಲಶಾಂತೇಶ್ವರ ಸಮೂದಾಯ ಭವನದಲ್ಲಿ ನಾಳೆ ದಿನಾಂಕ 27ರ ಭಾನುವಾರ ಬೆಳಿಗ್ಗೆ 11 ಗಂಟೆಗೆ ಕೋಲಶಾಂತೇಶ್ವರ ಮಠದ ಶ್ರೀ ಶಾಂತಲಿಂಗ ದೇಶಿಕೇಂದ್ರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಶಾಸಕ ಬಿ. ದೇವೆಂದ್ರಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ವಾಲ್ಮೀಕಿ ನಾಯಕ ಸಮಾಜದ ತಾಲ್ಲೂಕು ಅಧ್ಯಕ್ಷ ಅರಸಿಕೆರೆಯ ವೈ.ಡಿ. ಅಣ್ಣಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಲಿದ್ದು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಎಸ್.ವಿ. ರಾಮಚಂದ್ರಪ್ಪ, ಮಾಜಿ ಶಾಸಕ ಎಚ್.ಪಿ. ರಾಜೇಶ್, ಕಾಂಗ್ರೆಸ್ ಎಸ್.ಟಿ. ಘಟಕದ ಅಧ್ಯಕ್ಷ ಕೆ.ಪಿ. ಪಾಲಯ್ಯ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಜೆ. ಮಂಜುನಾಥ, ಅರಸಿಕೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಂಭತ್ತಹಳ್ಳಿ ಎಸ್. ಮಂಜುನಾಥ, ಪ್ರಗತಿಪರ ಚಿಂತಕ ಕೋಡಿಹಳ್ಳಿ ಭೀಮಪ್ಪ, ಮಡಿವಾಳ ಸಮಾಜದ ಜಿಲ್ಲಾಧ್ಯಕ್ಷ ಯರಬಳ್ಳಿ ಉಮಾಪತಿ, ವಕೀಲ ಎಚ್.ಕೆ. ಹಾಲೇಶ, ಪ್ರಗತಿಪರ ಸಂಘಟನೇಯ ಮುಖಂಡ ಹೊಸಹಳ್ಳಿ ಮಲ್ಲೇಶ, ಕೆರೆ ಗುಡಿಹಳ್ಳಿ ಹಾಲೇಶ, ವಾಲ್ಮೀಕಿ ನಾಯಕ ಸಮಾಜದ ಮಾಜಿ ಅಧ್ಯಕ್ಷ, ತಾಲ್ಲೂಕು ಪಂಚಾಯುತಿ ಮಾಜಿ ಅಧ್ಯಕ್ಷ ಲಕ್ಕಳ್ಳಿ ಹನುಮಂತಪ್ಪ, ಕೆ. ಉಚ್ಚೆಂಗೆಪ್ಪ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಆಲೂರು ನಿಂಗರಾಜ, ಮೋತಿನಾಯ್ಕ, ಮಾದಿಗ ಸಮಾಜದ ಮುಖಂಡ ಪೂಜಾರ್ ಮರಿಯಪ್ಪ, ಹೋಸಕೋಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ. ಶ್ರೀನಿವಾಸ, ಮುಖಂಡರಾದ ಹೆಗ್ಗೆರೆ ರಂಗಪ್ಪ, ಐರಾಣಿ ಚಂದ್ರು, ನಿವೃತ್ತ ಶಿಕ್ಷಕ ಬಾಲೇನಹಳ್ಳಿ ರೇವಣಸಿದ್ದಪ್ಪ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ.

## ನಗರದಲ್ಲಿ ಇಂದು ಸಾಂಸ್ಕೃತಿಕ ಸಂಭ್ರಮ

ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಕಲಾಕುಂಚ ಸಭಾಂಗಣದಲ್ಲಿ ಇಂದು ಸಂಜೆ 5ಕ್ಕೆ 'ದೀಪಾವಳಿ ಮತ್ತು ಕನ್ನಡ ರಾಜ್ಯೋತ್ಸವ ಸಾಂಸ್ಕೃತಿಕ ಸಂಭ್ರಮ' ಕಾರ್ಯಕ್ರಮ ನಡೆಯಲಿದೆ.

ವೃತ್ತಿ ರಂಗಭೂಮಿ ರಂಗಾಯಣದ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಸಂಸ್ಥೆಯ ಅಧ್ಯಕ್ಷ ಕೆ.ಹೆಚ್. ಮಂಜುನಾಥ್ ಅಧ್ಯಕ್ಷತೆ ವಹಿಸಲಿದ್ದಾರೆ.

ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಕರ್ನಾಟಕ ಮಾಧ್ಯಮ ಅಕಾಡೆಮಿಯ ಸದಸ್ಯ ಇ.ಎಂ. ಮಂಜುನಾಥ, ಯಕ್ಷರಂಗ ಸಂಸ್ಥೆಯ ಮಲ್ಯಾಡಿ ಪ್ರಭಾಕರ ಶೆಟ್ಟಿ, ಗಣೇಶ್ ಶೆಣೈ, ಹೇಮಾ ಶಾಂತಪ್ಪ ಪೂಜಾರಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ರಾಣೇಬೆನ್ನೂರು ದೊಡ್ಡಕೆರೆಗೆ ಬಾಗಿನ



ರಾಣೇಬೆನ್ನೂರು, ಅ.26- ಇಲ್ಲಿನ ದೊಡ್ಡಕೆರೆ ತುಂಬಿ ಕೋಡಿ ಬಿದ್ದಿದ್ದು, ಶಾಸಕ ಪ್ರಕಾಶ ಕೋಳಿವಾಡ ಅವರು, ಪತ್ನಿ ಪೂರ್ಣಿಮಾ ಜೊತೆ ಸೇರಿ ಇಂದು ಬಾಗಿನ ಅರ್ಪಿಸಿದರು. ನಗರಸಭೆ ಸದಸ್ಯರಾದ ಪುಟ್ಟಪ್ಪ ಮರಿಯಮ್ಮನವರ, ಸುಮಾ ಹುಚ್ಚಗೊಂಡರ, ಶಶಿ ಬಸೇನಾಯ್ಕರ, ಇರ್ಫಾನ್ ದಿಡಗೂರ, ಬಸವರಾಜ ಹುಚ್ಚಗೊಂಡರ, ಸೀತಾರಾಮರೆಡ್ಡಿ, ಶಿವಾನಂದ ಕನ್ನಪ್ಪಳರ, ನಾಗರಾಜ ಮತ್ತಿತರರಿದ್ದರು.

# ಬಸವಾಪಟ್ಟಣದಲ್ಲಿ ಕನ್ನಡ ರಥಕ್ಕೆ ಭವ್ಯ ಸ್ವಾಗತ



ದಾವಣಗೆರೆ, ಅ. 26- ಮಂಡ್ಯದಲ್ಲಿ ನಡೆಯಲಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಯುಕ್ತ ಗ್ರಾಮಕ್ಕೆ ಶುಕ್ರವಾರ ಸಂಜೆ ಆಗಮಿಸಿದ್ದ ಕನ್ನಡ ರಥಯಾತ್ರೆಗೆ ಗ್ರಾಮಸ್ಥರಿಂದ ಅಭೂತಪೂರ್ವ ಸ್ವಾಗತ ಸಿಕ್ಕಿತು.

ಗ್ರಾಮದ ದಾರಿಯುದ್ದಕ್ಕೂ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ, ಬಾರಿಸು ಕನ್ನಡ ಡಿಂಡಿಮವ ಓ ಕರ್ನಾಟಕ ಹೃದಯಶಿವ, ಕನ್ನಡವೇ ಸತ್ಯ ಕನ್ನಡವೇ ನಿತ್ಯ, ಕನ್ನಡ ಕನ್ನಡ ಬನ್ನಿ ನಮ್ಮ ಸಂಗಡ, ಸಿರಿಗನ್ನಡಂ ಗೆಲ್ಗೆ ಸಿರಿಗನ್ನಡಂ ಬಾಳ್ಗೆ, ಕನ್ನಡಾಂಬೆಗೆ ಮತ್ತು ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಜಯವಾಗಲಿ, ಈ ರೀತಿಯ

### ಮೆರಗು ನೀಡಿದ ಕನ್ನಡಪರ ಘೋಷಣೆಗಳು

ಕನ್ನಡಪರ ಘೋಷಣೆಗಳು ಹಾಗೂ ಕನ್ನಡದ ಗೀತೆಗಳು ಸಾರ್ವಜನಿಕರ ಗಮನ ಸೆಳೆದವು.

ರಥ ಯಾತ್ರೆಯ ನೇತೃತ್ವ ವಹಿಸಿದ್ದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಲ್.ಜಿ.ಮಧುಕುಮಾರ್ ಮಾತನಾಡಿ, ಪರಭಾಷೆಗಳ ವ್ಯಾಮೋಹವು ಕನ್ನಡದ ಮೂಲ ಬೇರುಗಳನ್ನು ಸಡಿಲಿಸುವ ಕೆಲಸವನ್ನು ಮಾಡುತ್ತಿದ್ದು, ಗ್ರಾಮ ಕರ್ನಾಟಕದ ಸಂಸ್ಕೃತಿಗೆ ಧಕ್ಕೆಯನ್ನುಂಟು ಮಾಡುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಕನ್ನಡ ಭಾಷೆಯ ಗತವೈಭವವನ್ನು ಮತ್ತೆ ಮರಳಿ ತರುವ ಕೆಲಸ ಇಂದಿನ ತುರ್ತು ಅಗತ್ಯಗಳಲ್ಲೊಂದು. ನಮ್ಮ ಪ್ರಯತ್ನಗಳು ರಾಜ್ಯೋತ್ಸವದ ಒಂದು ದಿನದ ಆಚರಣೆಗೆ ಸೀಮಿತವಾಗಬಾರದು.

ಕನ್ನಡ ಪುಸ್ತಕಗಳ ಅಧ್ಯಯನ, ಕನ್ನಡ ಶಾಲೆಗಳ ಸಬಲೀಕರಣ, ನಾಡು ನುಡಿಗೆ ಪೂರಕವಾದ ಸಿನಿಮಾಗಳ ನಿರ್ಮಾಣ, ನೆಲ, ಜಲ, ಭಾಷೆಗಳ ವಿಚಾರದಲ್ಲಿ ಯುವಜನತೆಯ ಚಿತ್ತ ಹೀಗೆ ಹತ್ತು ಹಲವು ಪ್ರಯತ್ನಗಳ ಮೂಲಕ ಭಾಷೆಯ ಆತಂಕವನ್ನು ದೂರ ಮಾಡಬೇಕಾಗಿದೆ. ಭಾಷೆಯ ಆತಂಕ ಮತ್ತು ಅದರ ತಲ್ಲಣಗಳು ನಮ್ಮ ವೈಯಕ್ತಿಕ ಆತಂಕಗಳಾಗಬೇಕು ಎಂದರು.

ಗ್ರಾಮ ಪಂಚಾಯ್ತಿ ಉಪಾಧ್ಯಕ್ಷರಾದ ಕುಸುಮ ಬಸವರಾಜಪ್ಪ, ಉಪ ತಹಶೀಲ್ದಾರ್ ನೀಲಮ್ಮ, ಪಿಡಿಓ ಅನಿಲ್, ಪಿಎಸ್ಐ ವೀಣಾ, ಪ್ರಾಂಶುಪಾಲ ಡಾ. ಮಂಜಪ್ಪ, ಡಾ. ಪದ್ಮಪ್ಪ ಮತ್ತು ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಾಲ್ಯ ವಿವಾಹ ಬದಲಿಗೆ ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಿ



ದಾವಣಗೆರೆ, ಅ.26- ಮಾತೃಶ್ರೀ ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆಯ ವತಿಯಿಂದ ಶನಿವಾರ ತಾಲ್ಲೂಕಿನ ಕಳವೂರು ಗ್ರಾಮದಲ್ಲಿ ಬಾಲ್ಯ ವಿವಾಹ ನಿಯಂತ್ರಣ ಕುರಿತು ಅರಿವು ಮೂಡಿಸಲಾಯಿತು.


ಈ ವೇಳೆ ಸಂಸ್ಥೆಯ ಪಿ. ಲಕ್ಷ್ಮಿ ಮಾತನಾಡಿ, ಮಹಿಳೆಯರಿಗೆ ಚಿಕ್ಕ ವಯಸ್ಸಿನಲ್ಲಿ ಮದುವೆ ಮಾಡುವ ಬದಲಿಗೆ ಹೆಚ್ಚಿನ ಶಿಕ್ಷಣ ನೀಡಬೇಕು ಮತ್ತು ಸಮಾಜದಲ್ಲಿನ ನಡಾವಳಿಯ ಬಗ್ಗೆ ಮನವರಿಕೆ ಮಾಡಿಸಬೇಕೆಂದು ತಾಯಂದಿರುಗಳಿಗೆ ತಿಳಿ ಹೇಳಿದರು.

ಬಾಲ್ಯ ವಿವಾಹಕ್ಕೆ ತುತ್ತಾದ ಮಹಿಳೆಗೆ ಸ್ವತಂತ್ರ ಇಲ್ಲದಂತಾಗಿದೆ. ಈ ತರಹ ವಿವಾಹವಾದ ಮಹಿಳೆಯರು ಅನಾರೋಗ್ಯಕ್ಕೆ ತುತ್ತಾಗುತ್ತಾರೆ ಎಂದ ಅವರು, ಮಕ್ಕಳಿಗೆ ಜವಾಬ್ದಾರಿ, ಪ್ರೀತಿ, ವಿನಯತೆ, ವಿದ್ಯೆ, ಸಂಸ್ಕೃತಿ-ಸಂಸ್ಕಾರ ಮತ್ತು ಆಚಾರ-ವಿಚಾರ ಹಾಗೂ ನೈತಿಕತೆಯ ಪಾಠ ಕಲಿಸುವಂತೆ ಕಿವಿಮಾತು ಹೇಳಿದರು.

ಅಂಗನವಾಡಿ ಶಿಕ್ಷಕಿ ಎಂ. ಅನಿತಾ ಮಾತನಾಡಿ, ಬಾಲ್ಯ ವಿವಾಹ ಸಮಾಜಕ್ಕೆ ದೊಡ್ಡ ಪಿಡುಗು. ಹೆಣ್ಣಾಗಲೀ, ಗಂಡಾಗಲೀ ಚಿಕ್ಕ ವಯಸ್ಸಿನಲ್ಲಿ ಮದುವೆಯಾದರೆ ಅವರಿಗೆ ಹಲವಾರು ಅನಾರೋಗ್ಯ ಸಮಸ್ಯೆಗಳು ಬರುತ್ತವೆ ಎಂದು ಮನವರಿಕೆ ಮಾಡಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಪದಾಧಿಕಾರಿಗಳಾದ ಯೋಗೇಶ್, ಕುಮಾರ್, ಆಂಜನೇಯ, ಎನ್.ಜಿ. ಶಿವಕುಮಾರ, ಪ್ರದೀಪ್, ಆನಂದ್ ಮತ್ತಿತರರು ಉಪಸ್ಥಿತರಿದ್ದರು.

## ತಾನೋಜಿರಾವ್ ಸಿಂಧೆ ನಿಧನ



ದಾವಣಗೆರೆ ಕೆ.ಟಿ.ಜೆ ನಗರ, ಶಿವಪ್ಪ ಸರ್ಕಲ್ ಹತ್ತಿರದ ವಾಸಿ ನಿತ್ಯಾನಂದ ಮೆಡಿಕಲ್ಸ್‌ನ ಮಾಲೀಕರಾದ ಮಂಜುನಾಥ್‌ರಾವ್ ಟಿ. ಇವರ ತಂದೆಯಾದ ನಿವೃತ್ತ ಗ್ರಾಸೀಂ ಕಂಪನಿ ಉದ್ಯೋಗಿ

**ತಾನೋಜಿರಾವ್ ಸಿಂಧೆ**

ಇವರು ದಿನಾಂಕ 26.10.2024ರ ಶನಿವಾರ ರಾತ್ರಿ 11.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 78 ವರ್ಷ ವಯಸ್ಸಾಗಿತ್ತು. ಪತ್ನಿ, ಇಬ್ಬರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 27.10.2024ರ ಭಾನುವಾರ ಮಧ್ಯಾಹ್ನ 4 ಗಂಟೆಗೆ ಭಗತ್‌ಸಿಂಗ್ ನಗರದ ಆರ್.ಹೆಚ್. ಬೃಂದಾವನದಲ್ಲಿ ನೆರವೇರಿಸಲಾಗುವುದು.

**ದುಃಖತಪ್ತ ಕುಟುಂಬವರ್ಗ, ಮೊ : 99806 60416, 70191 27098**

## ಎಂ. ಹನುಮಂತರಾವ್ (ಷಡಂಕರ್) ನಿಧನ



ದಾವಣಗೆರೆ 6ನೇ ಮುಖ್ಯ ರಸ್ತೆ, ಪಿ.ಜೆ. ಬಡಾವಣೆ ವಾಸಿ


**ಶ್ರೀ ಎಂ. ಹನುಮಂತರಾವ್ (ಷಡಂಕರ್)**

ಇವರು ದಿನಾಂಕ 27.10.2024ರ ಭಾನುವಾರ ಬೆಳಗಿನ ಜಾವ 12.50ಕ್ಕೆ ನಿಧನರಾದರು. ಮೃತರಿಗೆ 88 ವರ್ಷ ವಯಸ್ಸಾಗಿತ್ತು. ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 27.10.2024ರ ಭಾನುವಾರ ಮಧ್ಯಾಹ್ನ 4 ಗಂಟೆಗೆ ಗಾಂಧಿನಗರದ ಸಾರ್ವಜನಿಕ ರುದ್ರಭೂಮಿಯಲ್ಲಿ ನೆರವೇರಲಿದೆ.

**ದುಃಖತಪ್ತ ಕುಟುಂಬದವರು : ಮೊ : 97310 43757**

|| ಶ್ರೀ ಲೆಕ್ಕದೇಶ್ವರ ಪ್ರಸನ್ನ || || ಶ್ರೀ ರಾಚೋಟಿ ವೀರಭದ್ರೇಶ್ವರ ಪ್ರಸನ್ನ ||

## ಕೈಲಾಸ ಶಿವಗಣಾರಾಧನೆ ಆಹ್ವಾನ



ಜನನ : 15.11.1935, ನಿಧನ : 23.10.2024

ದಾವಣಗೆರೆ ಸಿಟಿ ವಾಸಿ ಶ್ರೀಮತಿ ಅಕ್ಕಮ್ಮ ಮತ್ತು ಮಕ್ಕಳು ಇವರು ಮಾಡುವ ವಿಜ್ಞಾಪನೆಗಳು. ದಿನಾಂಕ 23.10.2024ನೇ ಬುಧವಾರ ಬೆಳಿಗ್ಗೆ 10.30ಕ್ಕೆ ನನ್ನ ಪೂಜ್ಯ ಪತಿಯವರಾದ

**ಶ್ರೀ ಬಸವರಾಜಪ್ಪ ಸಿ. ಜಂಬಿಗಿ**

ಇವರು ಶಿವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ

**ಕೈಲಾಸ ಶಿವಗಣಾರಾಧನೆಯನ್ನು**

ದಿನಾಂಕ 27.10.2024ನೇ ಭಾನುವಾರ ಮಧ್ಯಾಹ್ನ 12.30 ಗಂಟೆಗೆ ದಾವಣಗೆರೆ ಕೆ.ಬಿ. ಬಡಾವಣೆ 4ನೇ ಮೇನ್, 1ನೇ ಕ್ರಾಸ್‌ನಲ್ಲಿರುವ ಮೃತರ ಸ್ವಗೃಹದಲ್ಲಿ ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

**ದುಃಖತಪ್ತರು : ಶ್ರೀಮತಿ ಅಕ್ಕಮ್ಮ ಮತ್ತು ಮಗಳು, ಅಳಿಯ, ಮೊಮ್ಮಕ್ಕಳು ಹಾಗೂ ಜಂಬಿಗಿ ವಂಶಸ್ಥರು ಹಾಗ ಬಂಧು ಮಿತ್ರರು.**

## ಕಲಾಕುಂಚದಿಂದ ಪ್ರಬಂಧ ಸ್ಪರ್ಧೆ

ದಾವಣಗೆರೆ,ಅ.26- ನಗರದ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ 'ಕನ್ನಡ ರಾಜ್ಯೋತ್ಸವ'ದ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಪ್ರಬಂಧ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಕನ್ನಡ ನಾಡು, ನುಡಿ ವಿಷಯದ ಕುರಿತು ಮೂರು ಪುಟಗಳಿಗೆ ಮೀರದಂತೆ ಕನ್ನಡದಲ್ಲಿ ಪ್ರಬಂಧ ಬರೆದು ನ.10ರ ಒಳಗಾಗಿ ಕಳುಹಿಸಬೇಕು ಎಂದು ಸಂಸ್ಥೆಯ ಸಂಸ್ಥಾಪಕ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ. ಕಳುಹಿಸಬೇಕಾದ ವಿಳಾಸ: ಶ್ರೀಮತಿ ಮಂಜುಳಾ ಪ್ರಸಾದ್ ಬಂಗೇರ, 'ಕೌಸ್ತುಭ' # 864/14, 2ನೇ ತಿರುವು, ಸರಸ್ವತಿ ಬಡಾವಣೆ, 'ಬಿ' ಬ್ಲಾಕ್, ದಾವಣಗೆರೆ - 577005.

## ಕಸ್ಟಡಿಯಲ್ಲಿದ್ದಾಗ ಬಿಶ್ನೋಯಿ ಸಂದರ್ಶನ, 7 ಪೊಲೀಸರ ಅಮಾನತ್ತು

ಚಂಡಿಘಡ, ಅ. 26 - ಭೂಗತ ಲಾರೆನ್ಸ್ ಬಿಶ್ನೋಯಿ ಪೊಲೀಸ್ ಕಸ್ಟಡಿಯಲ್ಲಿದ್ದಾಗ ಸಂದರ್ಶನ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪಂಜಾಬ್ ಪೊಲೀಸರು ಏಳು ಸಿಬ್ಬಂದಿಗಳನ್ನು ಅಮಾನತ್ತುಗೊಳಿಸಿದ್ದಾರೆ. ಇವರಲ್ಲಿ ಡಿ.ಎಸ್.ಪಿ. ಹಂತದ ಇಬ್ಬರು ಅಧಿಕಾರಿಗಳೂ ಸೇರಿದ್ದಾರೆ.

ಬಿಶ್ನೋಯಿ ಈ ಹಿಂದೆ ಪಂಜಾಬ್ ಪೊಲೀಸರ ಕಸ್ಟಡಿಯಲ್ಲಿದ್ದಾಗ ಹಾಗೂ ರಾಜಸ್ಥಾನದಲ್ಲಿದ್ದಾಗ ಎರಡು ಸಂದರ್ಶನ ನೀಡಿದ್ದು ಕಂಡುಬಂದಿತ್ತು. ಈ ಬಗ್ಗೆ ತನಿಖೆ ನಡೆಸಲು ವಿಶೇಷ ತಂಡ ರಚಿಸಲಾಗಿತ್ತು. ಏಳು ಅಧಿಕಾರಿಗಳು ತಪ್ಪು ಮಾಡಿರುವುದಾಗಿ ತನಿಖಾ ತಂಡ ತನ್ನ ವರದಿಯಲ್ಲಿ ತಿಳಿಸಿತ್ತು.

# ಕೋಲ್ಡ್‌ಪ್ಲೇ, ದೊಸಾಂಜ್ ಕಾರ್ಯಕ್ರಮಗಳ ಟಿಕೆಟ್ ಕಾಳಸಂತೆ

## ದೇಶದ ಹಲವೆಡೆ ಇ.ಡಿ. ದಾಳಿ, ಪ್ರಕರಣ ದಾಖಲು

ನವದೆಹಲಿ, ಅ. 26 - ಎರಡು ಬಹು ನಿರೀಕ್ಷಿತ ಸಂಗೀತ ಕಾರ್ಯಕ್ರಮಗಳ ಟಿಕೆಟ್‌ಗಳನ್ನು ಕಾಳಸಂತೆಯಲ್ಲಿ ಮಾರಿರುವುದು ಪತ್ತೆ ಮಾಡಿರುವುದಾಗಿ ಜಾರಿ ನಿರ್ದೇಶನಾಲಯ ತಿಳಿಸಿದೆ. ಬ್ರಿಟಿಷ್ ರಾಕ್‌ಬ್ಯಾಂಡ್ ಕೋಲ್ಡ್‌ಪ್ಲೇ ಹಾಗೂ ನಟ - ಗಾಯಕ ದಿಲ್ಜಿತ್ ದೊಸಾಂಜ್ ಅವರ ಕಾರ್ಯಕ್ರಮದ ಟಿಕೆಟ್‌ಗಳನ್ನು ಕಾಳಸಂತೆಯಲ್ಲಿ ಮಾರಲಾಗಿತ್ತು.

ಈ ಬಗ್ಗೆ ಬೆಂಗಳೂರು ಸೇರಿದಂತೆ ದೇಶದ ಹದಿಮೂರು ಕಡೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿತ್ತು. ಅಕ್ರಮ ಹಣ ತಡೆ ಕಾಯ್ದೆ ಸೇರಿದಂತೆ ಹಲವು ಸೆಕ್ಷನ್‌ಗಳ ಅನ್ವಯ ಈ ಬಗ್ಗೆ ಪ್ರಕರಣ ದಾಖಲಿಸಲಾಗಿದೆ.

ದೆಹಲಿಯಲ್ಲಿ ಅಕ್ಟೋಬರ್ 26-27ರಂದು ದೊಸಾಂಜ್ ಅವರ ಕಾರ್ಯಕ್ರಮ ನಡೆಯಲಿದೆ. 2025ರ ಜನವರಿಯಲ್ಲಿ ಮುಂಬೈನಲ್ಲಿ ಕೋಲ್ಡ್‌ಪ್ಲೇ ಕಾರ್ಯಕ್ರಮ ನಡೆಯಲಿದೆ.

ಈ ಕಾರ್ಯಕ್ರಮದ ಟಿಕೆಟ್‌ಗಳು ಕ್ಷಣಗಳಲ್ಲೇ ಮಾರಾಟವಾಗಿದ್ದವು. ನಂತರ ವಂಚಕರು ಟಿಕೆಟ್ ಹೆಸರಿನಲ್ಲಿ ಹಲವರಿಗೆ ಮೋಸ ಮಾಡಿರುವ ಪ್ರಕರಣಗಳು ಬೆಳಕಿಗೆ ಬಂದಿದ್ದವು. ಈ ಬಗ್ಗೆ ದೇಶದ ಹಲವೆಡೆ ಎಫ್‌ಐಆರ್‌ಗಳನ್ನು ದಾಖಲಿಸಲಾಗಿತ್ತು. ಇವುಗಳನ್ನು ಪರಿಗಣಿಸಿ ಜಾರಿ ನಿರ್ದೇಶನಾಲಯ ಕ್ರಮ ತೆಗೆದುಕೊಂಡಿದೆ.

ಕಾರ್ಯಕ್ರಮದ ಟಿಕೆಟ್‌ಗಳಿಗೆ ಬಾರಿ ಬೇಡಿಕೆ ಇರುವುದನ್ನು ನಕಲಿ ಟಿಕೆಟ್ ಮಾರಾಟಗಾರರು ಹಾಗೂ ಕಾಳಸಂತೆಯಲ್ಲಿ ಟಿಕೆಟ್ ಮಾರುವವರು ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಜಾರಿ ನಿರ್ದೇಶನಾಲಯ ಹೇಳಿದೆ. ಬುಕ್ ಮೈ ಶೋ ಹಾಗೂ ಜೊಮ್ಯಾಟೋ ಲೈವ್ ಮೂಲಕ ಕಾರ್ಯಕ್ರಮದ ಟಿಕೆಟ್‌ಗಳನ್ನು ಮಾರಲಾಗಿತ್ತು. ಕೆಲವೇ ನಿಮಿಷಗಳಲ್ಲಿ ಟಿಕೆಟ್‌ಗಳು ಮಾರಾಟಗೊಂಡಿದ್ದವು. ನಂತರ ಕಾಳಸಂತೆಯಲ್ಲಿ ದುಬಾರಿ ಬೆಲೆಗೆ ಟಿಕೆಟ್ ಮಾರಲಾಗಿತ್ತು. ಆದರೆ, ದುಬಾರಿ ಬೆಲೆ ನೀಡಿದರೂ, ನಕಲಿ ಟಿಕೆಟ್ ಮಾರಿದ್ದು ಕಂಡು ಬಂದಿತ್ತು. ಇನ್ನು ಕೆಲವರು ಅಸಲಿ ಟಿಕೆಟ್‌ಗಳಿಗೆ ಭಾರೀ ಬೆಲೆ ನಿಗದಿ ಪಡಿಸಲಾಗಿದೆ ಎಂದು ದೂರಿದ್ದರು.

ಈ ರೀತಿಯ ಕಾರ್ಯಕ್ರಮಗಳ ಟಿಕೆಟ್‌ಗಳನ್ನು ಮರು ಮಾರಾಟ ಮಾಡುವುದರ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ದೆಹಲಿ ಹೈಕೋರ್ಟ್‌ನಲ್ಲಿ ಅರ್ಜಿಯೊಂದನ್ನು ದಾಖಲಿಸಲಾಗಿತ್ತು ಈ ಬಗ್ಗೆ ಕೇಂದ್ರ ಸರ್ಕಾರ ಉತ್ತರಿಸುವಂತೆ ಹೈಕೋರ್ಟ್ ತಿಳಿಸಿದೆ.

# ಸಂವಿಧಾನಕ್ಕೆ 75 ವರ್ಷ : ನ. 26ಕ್ಕೆ ಸಭೆ

ನವದೆಹಲಿ, ಅ. 26 - ಸಂವಿಧಾನಕ್ಕೆ ಅನುಮೋದನೆ ನೀಡಿ 75 ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ, ನವೆಂಬರ್ 26ರಂದು ಸಂಸತ್ತಿನ ಉಭಯ ಸದನಗಳ ವಿಶೇಷ ಜಂಟಿ ಸಭೆ ನಡೆಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಸಂವಿಧಾನ ಸದನದ ಸೆಂಟ್ರಲ್ ಹಾಲ್‌ನಲ್ಲಿ ಲೋಕಸಭೆ ಹಾಗೂ ರಾಜ್ಯಸಭೆಗಳ ಜಂಟಿ ಸಭೆ ನಡೆಯುವ ಸಾಧ್ಯತೆ ಇದೆ. ನವೆಂಬರ್ 26, 1949 ರಂದು ಸಂವಿಧಾನಕ್ಕೆ ಅಂಗೀಕಾರ ನೀಡಲಾಗಿತ್ತು. ಜನವರಿ 26, 1950 ರಂದು ಇದು ಜಾರಿಗೆ ಬಂದಿತ್ತು.

# ಮಲೇಬೆನ್ನೂರಿನಲ್ಲಿ ಇಂದು ಶೋಭಾಯಾತ್ರೆ

ಇಂದು ಬೆಳಗ್ಗೆ 10-30 ರಿಂದ ರಾಜಾವೀರ ಮದಕರಿ ನಾಯಕ ಯುವ ಸೇವಾ ಸಮಿತಿಯಿಂದ ವಾಲ್ಮೀಕಿ ಜಯಂತಿ ಅಂಗವಾಗಿ ಬೃಹತ್ ಶೋಭಾಯಾತ್ರೆ ನಡೆಯಲಿದ್ದು, ಎಡಿಸಿ ಲೋಕೇಶ್ ಅವರು ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ನೀರಾವರಿ ಇಲಾಖೆಯ ರೈತ ಭವನದಲ್ಲಿ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ.

# ದೇವೇಗೌಡ ನಿವಾಸಕ್ಕೆ ಉಪ ರಾಷ್ಟ್ರಪತಿ ಭೇಟಿ



ಬೆಂಗಳೂರು, ಅ. 26 - ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು, ಧರ್ಮಪತ್ನಿ ಸುದೇಶ್ ಧನಕರ್ ಅವರೊಂದಿಗೆ ಇಂದು ಮಾಜಿ ಪ್ರಧಾನಿ ಹೆಚ್. ಡಿ.ದೇವೇಗೌಡ ಅವರ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಬೆಳಗ್ಗೆ 9 ಗಂಟೆಗೆ ಆಗಮಿಸಿದ ಉಪರಾಷ್ಟ್ರಪತಿ ಒಂದು ಗಂಟೆಗೂ ಹೆಚ್ಚು ಕಾಲ ಇದ್ದು, ದೇವೇಗೌಡ ಅವರ ಪತ್ನಿ ಚನ್ನಮ್ಮ ಅವರ ಆರೋಗ್ಯದ ಬಗ್ಗೆ ವಿಚಾರಿಸಿದರು.

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಚನ್ನಮ್ಮ ಅವರು ಆದಷ್ಟು ಬೇಗ ಗುಣಮುಖರಾಗಲಿ ಎಂದು ಹಾರೈಸಿದ ಉಪರಾಷ್ಟ್ರಪತಿಗಳು, ನಂತರ ಅವರನ್ನು ದೆಹಲಿಗೆ ಕರೆದುಕೊಂಡು ಬನ್ನಿ ಎಂದು ದೇವೇಗೌಡರಿಗೆ ತಿಳಿಸಿದರು.

ಉಪರಾಷ್ಟ್ರಪತಿಗಳ ಮಾತಿಗೆ ಸಮ್ಮತಿಸಿದ ದೇವೇಗೌಡ ಅವರು, ತಮ್ಮ ಮೇಲೆ ಇಟ್ಟಿರುವ ಪ್ರೀತಿ, ವಿಶ್ವಾಸ, ಅಭಿಮಾನಕ್ಕೆ ಹೃದಯ ತುಂಬಿ ಬಂದಿದೆ, ತಮ್ಮ ಆಗಮನ ನಮ್ಮ ಇಡೀ ಕುಟುಂಬಕ್ಕೆ ಬಹಳ ಸಂತೋಷ ಉಂಟು ಮಾಡಿದೆ ಎಂದು ಕೃತಜ್ಞತೆ ಸಲ್ಲಿಸಿದರು.

ಉಪರಾಷ್ಟ್ರಪತಿ ಜಗದೀಪ್ ಧನಕರ್ ದಂಪತಿ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಜತೆ ಉಪಹಾರ ಸೇವಿಸಿದರು. ಬಳಿಕ ಕುಟುಂಬದ ಎಲ್ಲಾ ಸದಸ್ಯರ ಕುಶಲೋಪರಿ ವಿಚಾರಿಸಿ, ಪುಟ್ಟ ಮಕ್ಕಳೊಂದಿಗೆ ಉಪರಾಷ್ಟ್ರಪತಿಗಳು ಕೆಲ ಕಾಲ ಕಳೆದರು.

# ಎಲೆಕ್ಟ್ರಿಕ್ ಥ್ರಸ್ಟರ್‌ಗಳ ಮೂಲಕ ಉಪಗ್ರಹ ಉಡಾವಣೆ



ನವದೆಹಲಿ, ಅ. 26 - ಬರುವ ಡಿಸೆಂಬರ್ ತಿಂಗಳಲ್ಲಿ ದೇಶೀಯವಾಗಿ ನಿರ್ಮಿಸಲಾದ ಮೊದಲ ಎಲೆಕ್ಟ್ರಿಕ್ ಥ್ರಸ್ಟರ್‌ಗಳ ಉಪಗ್ರಹ ಉಡಾವಣೆ ಮಾಡಲಾಗುವುದು. ಈ ರಾಕೆಟ್‌ಗಳು ಹಗುರವಾಗಿದ್ದು ಹೆಚ್ಚು ಶಕ್ತಿ ಹೊಂದಿರಲಿವೆ.

ಸಮಾರಂಭವೊಂದರಲ್ಲಿ ಮಾತನಾಡಿರುವ ಭಾರತೀಯ ಬಾಹ್ಯಾಕಾಶ ಸಂಸ್ಥೆ ಇಸ್ರೋ ಅಧ್ಯಕ್ಷ ಎಸ್. ಸೋಮನಾಥ್, ಟೆಕ್ನಾಲಜಿ ಡೆಮಾನ್‌ಸ್ಟ್ರೇಟರ್ ಸೆಟಲೈಟ್ (ಟಿಡಿಎಸ್ - 01) ಉಡಾವಣೆಗಾಗಿ ದೇಶೀಯವಾಗಿ ಅಭಿವೃದ್ಧಿ ಪಡಿಸಿರುವ ಎಲೆಕ್ಟ್ರಿಕ್ ಪ್ರಪಲ್ಷನ್ ಬಳಸಲಾಗುವುದು ಎಂದಿದ್ದಾರೆ.

ನಾಲ್ಕು ಟನ್‌ಗಳ ಉಪಗ್ರಹವನ್ನು ಬಾಹ್ಯಾಕಾಶದಲ್ಲಿ ತನ್ನ ಕಕ್ಷೆಗೆ ತಲುಪಿಸಲು 2-2.5 ಟನ್ ಇಂಧನ ಬೇಕಾಗುತ್ತದೆ. ಎಲೆಕ್ಟ್ರಿಕ್ ಪ್ರಪಲ್ಷನ್ ಬಳಸಿದಲ್ಲಿ, ಇಂಧನದ ಅಗತ್ಯ 200 ಕೆ.ಜಿ.ಗೆ ಇಳಿಯಲಿದೆ ಎಂದು ಸೋಮನಾಥ್ ಹೇಳಿದ್ದಾರೆ.

ಎಲೆಕ್ಟ್ರಿಕ್ ಪ್ರಪಲ್ಷನ್ ಸಿಸ್ಟಂನಲ್ಲಿ ಅರ್ಗಾನ್ ರೀತಿಯ ಅನಿಲಗಳನ್ನು ಬಳಸಲಾಗುತ್ತದೆ. ಇವು ಸೌರಶಕ್ತಿಯ ನೆರವಿನಿಂದ ಕಾರ್ಯ ನಿರ್ವಹಿಸುತ್ತವೆ ಎಂದವರು ತಿಳಿಸಿದರು. ಆದರೆ, ಎಲೆಕ್ಟ್ರಿಕ್ ಪ್ರಪಲ್ಷನ್ ಕಾರ್ಯನಿರ್ವಹಣೆ ನಿಧಾನವಾಗಿರುತ್ತದೆ. ರಸಾಯನಿಕ ಥ್ರಸ್ಟರ್ ಮೂಲಕ ಕೇವಲ ವಾರದಲ್ಲಿ ಉಪಗ್ರಹ ತನ್ನ ನಿಗದಿತ ಕಕ್ಷೆಗೆ ಸೇರುತ್ತದೆ. ಆದರೆ, ಎಲೆಕ್ಟ್ರಿಕ್ ಥ್ರಸ್ಟರ್‌ಗಳಿಗೆ ಮೂರು ತಿಂಗಳು ಬೇಕಾಗುತ್ತದೆ ಎಂದು ಸೋಮನಾಥ್ ಹೇಳಿದರು.

## ಹೆಚ್. ಸರಸ್ವತಿ ಅವರಿಗೆ ಪಿಎಚ್‌ಡಿ



ದಾವಣಗೆರೆಯ ಜೈನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಸಹಾಯಕ ಪ್ರಾಧ್ಯಾಪಕರಾದ, ಕಂಪ್ಯೂಟರ್ ಸೈನ್ಸ್ ವಿಭಾಗದ **ಹೆಚ್. ಸರಸ್ವತಿ** ಅವರು ಮಂಡಿಸಿದ **'ಆ್ಯನ್ ಎಫಿಷಿಯಂಟ್ ನಾವೆಲ್ ಅಪ್ರೋಚ್ ಫಾರ್ ಆ್ಯನ್ ಅರ್ಲಿ ಪ್ರಿಡಿಕ್ಷನ್ ಆಫ್ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಯೂಸಿಂಗ್ ಡೀಪ್ ಲರ್ನಿಂಗ್ ಟೆಕ್ನಿಕ್'** ವಿಷಯದ ಪೌಢ ಪ್ರಬಂಧಕ್ಕೆ ವಿಶ್ವೇಶ್ವರಯ್ಯ ವಿಶ್ವವಿದ್ಯಾಲಯ ಬೆಳಗಾವಿ ಪಿಎಚ್‌ಡಿ ಪದವಿ ನೀಡಿ ಗೌರವಿಸಿದೆ. **ಸರಸ್ವತಿ** ಅವರು ಶ್ರೀ ಎಸ್. ಶೇಖರಪ್ಪ, ಮಹಾನಗರ ಪಾಲಿಕೆಯ ನಿವೃತ್ತ ಕಮೀಷನರ್ ಅವರ ಪುತ್ರಿಯಾಗಿದ್ದಾರೆ.

# ಕಾಂಗ್ರೆಸ್ ಶಾಸಕ ಸೈಲ್‌ಗೆ 7 ವರ್ಷ ಜೈಲು ಶಿಕ್ಷೆ

ಬೆಂಗಳೂರು, ಅ. 26 - ಬೇಲೇಕೇರಿ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ 7 ವರ್ಷ ಕಾರಾಗೃಹ ಶಿಕ್ಷೆ ವಿಧಿಸಿದೆ.

ಅದಿರು ನಾಪತ್ತೆ ಪ್ರಕರಣದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು, ಅಂಕೋಲಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಸೈಲ್‌ಗೆ 7 ವರ್ಷಗಳ ಶಿಕ್ಷೆ ಹಾಗೂ 44 ಕೋಟಿ ರೂಪಾಯಿ ದಂಡ ವಿಧಿಸಿದ್ದಾರೆ.

ಸತೀಶ್ ಸೈಲ್ ವಿರುದ್ಧ ಬೇಲೇಕೇರಿ ಅದಿರು ಅಕ್ರಮ ಮಾರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಒಟ್ಟು 6 ಪ್ರಕರಣಗಳನ್ನು ದಾಖಲಿಸಲಾಗಿತ್ತು. ಗುರುವಾರ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಆರೋಪ ಸಾಬೀತಾಗಿತ್ತು. ಇದೀಗ ಶಿಕ್ಷೆಯ ಪ್ರಮಾಣ ಪ್ರಕಟವಾಗಿದೆ.

ಸತೀಶ್ ಸೈಲ್‌ಗೆ ವಂಚನೆ ಪ್ರಕರಣದಲ್ಲಿ 7 ವರ್ಷ ಜೈಲು ಶಿಕ್ಷೆಯಾಗಿದೆ. ಒಳಸಂಚು ಆರೋಪದಡಿ 5 ವರ್ಷ ಮತ್ತು ಕಳ್ಳತನ ಆರೋಪದಡಿ 3 ವರ್ಷ ಜೈಲು ಶಿಕ್ಷೆ ವಿಧಿಸಲಾಗಿದೆ. ಇದೇ ವೇಳೆ ನ್ಯಾಯಾಲಯ ಒಟ್ಟಾರೆ 44 ಕೋಟಿ ರೂ.ಗಳಿಗೂ ಹೆಚ್ಚು ದಂಡ ವಿಧಿಸಿದೆ.

ಎರಡು ವರ್ಷಗಳಿಗೂ ಹೆಚ್ಚು ಅವಧಿಯ ಶಿಕ್ಷೆಗೆ ಗುರಿಯಾದವರು ಶಾಸಕ ಸ್ಥಾನ ಕಳೆದುಕೊಳ್ಳಲಿದ್ದಾರೆ. ಹೀಗಾಗಿ ಸೈಲ್ ಶಾಸಕ ಸ್ಥಾನ ಕಳೆದುಕೊಳ್ಳುವ ಸಾಧ್ಯತೆ ಇದೆ. ಉನ್ನತ ನ್ಯಾಯಾಲಯ ಶಿಕ್ಷೆಗೆ ತಡೆಯಾಜ್ಞೆ ನೀಡಿದಲ್ಲಿ ಮಾತ್ರ ಅವರು ಶಾಸಕರಾಗಿ ಮುಂದುವರೆಯಲು ಸಾಧ್ಯವಾಗಲಿದೆ.

ಬಳ್ಳಾರಿಯಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಸಲಾ ಗಿದ್ದ ಕೋಟ್ಯಂತರ ರೂಪಾಯಿ ಮೌಲ್ಯದ 11,312 ಮೆಟ್ರಿಕ್ ಟನ್ ಕಬ್ಬಿಣದ ಅದಿರನ್ನು 2010ರಲ್ಲಿ ಬೇಲೇಕೇರಿ ಬಂದರಿನಲ್ಲಿ ಸಂಗ್ರಹಿಸಿ ಇಡಲಾಗಿತ್ತು. ಆದರೆ, ಆರೋಪಿಗಳು ಅಧಿಕಾರಿಗಳೊಂದಿಗೆ ಶಾಮೀಲಾಗಿ ಚೀನಾಗೆ ಕಳ್ಳಸಾಗಣೆ ಮಾಡಿದ್ದಾರೆ ಎಂದು ಪ್ರಕರಣ ದಾಖಲಿಸಲಾಗಿತ್ತು.

# ಚಂಡಮಾರುತ : 1.75 ಲಕ್ಷ ಎಕರೆ ಬೆಳೆ ಹಾನಿ

ಭುವನೇಶ್ವರ, ಅ. 26 – ಡಾನಾ ಚಂಡಮಾರುತದ ಕಾರಣದಿಂದಾಗಿ ಒಡಿಶಾದಲ್ಲಿ 1.75 ಲಕ್ಷ ಎಕರೆ ಬೆಳೆ ಹಾನಿಯಾಗಿದೆ ಹಾಗೂ 2.80 ಲಕ್ಷ ಎಕರೆ ಬೆಳೆ ಜಲಾವೃತಗೊಂಡಿದೆ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ಚಂಡಮಾರುತದ ಕಾರಣದಿಂದಾಗಿ 8 ಲಕ್ಷ ಜನರನ್ನು ಆಶ್ರಯ ತಾಣಗಳಿಗೆ ಕಳಿಸಲಾಗಿತ್ತು. ಪರಿಸ್ಥಿತಿ ಸುಧಾರಿಸಿದ ನಂತರ ಸಾಕಷ್ಟು ಜನರು ತಮ್ಮ ಮನೆಗಳಿಗೆ ಮರಳಿದ್ದಾರೆ.

**Walk - In Interview**

BLUECHIP™
EXPERT ADVICE. EASY INVESTING.

**REQUIRED**

**Sales Executive (Male), Branch Assistant (Female)**

We Require smart candidates with good communication skill to sell various financial products through our branches across Karnataka. Preference to **FRESH GRADUATES** below 26 Yrs age.
**Package:** Salary plus incentives on monthly basis.
**Interview Date & Time:** 29th & 30th Oct, 2024, 10.00 AM to 5.00 PM
**Interview Venue:** No.57/2, First Floor, Jayadev, AVK College Road, Opp Halemane Hotel, Davanagere-577 002.
Tel No: (08192) 270 252 / 270 253

Bluechip Insurance Broking Pvt Ltd., CIN: U66010MH2006PTC161904
Regd Office: 101, 1st Floor, Majithia Chambers, Abdul Razzak, Allana Magr, Mumbai-400 001
Tel: 022-22659033 / 22629034, E-Mail: customer.support@bluechipindia.co.in

**ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು**

Green Dust™ Since 2012
is now
e STORE
Discount 365 days
Clearance & Factory Seconds Market Place
30 to 40% off on MRP
ಅಗ ಗ್ರೀನ್ ಡಸ್ಟ್ ಇದೀಗ ಈ ಸ್ಟೋರ್ ಆಗಿ ಬದಲಾಗಿದೆ
Whirlpool * With warranty
Refrigerator & Washing Machine
#971/2, 1st Cross, Opp. Devi Marbels
KTJ Nagar, Davanagere.
94480 65727, 87469 12345



## ಸಂಕ್ಷಿಪ್ತ ಸುದ್ದಿ

**ಚಂಡಮಾರುತ ಸಾವಿನ ಸಂಖ್ಯೆ ನಾಲ್ಕಕ್ಕೆ ಏರಿಕೆ**
ಕೊಲ್ಕೊತಾ : ಡಾನಾ ಚಂಡಮಾರುತದ ಕಾರಣದಿಂದ ಸಂಭವಿಸಿದ ಅವಘಡಗಳಲ್ಲಿ ಶನಿವಾರ ಇಬ್ಬರು ಸಾವನ್ನಪ್ಪಿದ್ದಾರೆ. ಇದರಿಂದ ಚಂಡಮಾರುತದಲ್ಲಿ ಪಶ್ಚಿಮ ಬಂಗಾಳದಲ್ಲಿ ಮೃತರ ಸಂಖ್ಯೆ ನಾಲ್ಕಕ್ಕೆ ಏರಿಕೆಯಾಗಿದೆ.

**ಮಹಾರಾಷ್ಟ್ರದಲ್ಲಿ ಎಎಪಿ ಸ್ಪರ್ಧೆ ಇಲ್ಲ**
ನವದೆಹಲಿ : ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸದಿರಲು ಆಮ್ ಆದ್ಮಿ ಪಾರ್ಟಿ ನಿರ್ಧರಿಸಿದೆ. ಪಕ್ಷದ ನಾಯಕ ಅರವಿಂದ ಕೇಜ್ರಿವಾಲ್ ಅವರು ಮಹಾವಿಕಾಸ್ ಅಗಾಡಿ (ಎಂ.ವಿ.ಎ.) ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸಲಿದ್ದಾರೆ.

**ಯುವ ವಕೀಲರಿಗೆ ಸೂಕ್ತ ವೇತನ ನೀಡಬೇಕು : ಚಂದ್ರಚೂಡ್**
ನವದೆಹಲಿ : ಕಲಿಕೆಗಾಗಿ ವಕೀಲರ ಒಕ್ಕೂಟಗಳಿಗೆ ಸೇರುವ ಯುವ ವಕೀಲರಿಗೆ ಹಿರಿಯ ವಕೀಲರು ಸೂಕ್ತ ವೇತನ ನೀಡಬೇಕು ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಹೇಳಿದ್ದಾರೆ.

**ಪೊಲೀಸ್ ವಾಹನದ ಮೇಲೆ ದಾಳಿ, 10 ಸಾವು**
ತೆಹರಾನ್ : ಇರಾನ್‌ನ ಪ್ರಕ್ಷುಬ್ಧಿತ ದಕ್ಷಿಣ ಪ್ರಾಂತ್ಯದಲ್ಲಿ ಪೊಲೀಸ್ ಬೆಂಗಾವಲು ವಾಹನದ ಮೇಲೆ ದಾಳಿ ನಡೆದಿದ್ದು, ಕನಿಷ್ಠ 10 ಅಧಿಕಾರಿಗಳು ಸಾವನ್ನಪ್ಪಿದ್ದಾರೆ.

**ವಿಮಾನ ನಿಲ್ದಾಣಕ್ಕೆ ಬೆದರಿಕೆ, ಓರ್ವನ ಬಂಧನ**
ನವದೆಹಲಿ : ಇಲ್ಲಿನ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬೆದರಿಕೆಯ ಇ-ಮೇಲ್ ಕಳಿಸಿದ 25 ವರ್ಷದ ವ್ಯಕ್ತಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ.

**ಸಂಪೂರ್ಣ ಮಾಹಿತಿ ನೀಡದ ಪ್ರಿಯಾಂಕ : ಬಿಜೆಪಿ ಆರೋಪ**
ನವದೆಹಲಿ : ಪ್ರಿಯಾಂಕ ಗಾಂಧಿ ವಾದ್ರಾ ಅವರು ಕೇರಳದ ವಯನಾಡು ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಸುವಾಗ ಮಾಹಿತಿಯನ್ನು ಸಂಪೂರ್ಣ ಬಹಿರಂಗ ಪಡಿಸಿಲ್ಲ. ತಮ್ಮ ಪತಿ ರಾಬರ್ಟ್ ವಾದ್ರಾ ಆಸ್ತಿ ವಿವರ ಸಲ್ಲಿಸಿಲ್ಲ ಎಂದು ಬಿಜೆಪಿ ಆರೋಪಿಸಿದೆ.

**ಕೇಜ್ರಿವಾಲ್ ಹತ್ಯೆಗೆ ಸಂಚು ಎಂದ ಎಎಪಿ, ಪ್ರಹಸನ ಎಂದ ಬಿಜೆಪಿ**
ನವದೆಹಲಿ : ಆಮ್ ಆದ್ಮಿ ಪಾರ್ಟಿ ನಾಯಕ ಅರವಿಂದ ಕೇಜ್ರಿವಾಲ್ ಹತ್ಯೆಗೆ ಸಂಚು ನಡೆಸಲಾಗಿದೆ. ಅವರಿಗೆ ಏನಾದರೂ ಆದರೆ ಬಿಜೆಪಿ ಹೊಣೆ ಎಂದು ಪಕ್ಷ ಹೇಳಿದೆ. ಇದಕ್ಕೆ ತಿರುಗೇಟು ನೀಡಿರುವ ಬಿಜೆಪಿ, ಆಮ್ ಆದ್ಮಿ ಪಾರ್ಟಿ ಪ್ರಹಸನ ನಡೆಸಿದೆ ಎಂದು ಹೇಳಿದೆ.

**ಒಕ್ಕೂಟ ಸಹಕಾರಕ್ಕೆ ಜಿ.ಎಸ್.ಟಿ. ಉದಾಹರಣೆ**
ನವದೆಹಲಿ : ಸಹಕಾರ ಒಕ್ಕೂಟ ವ್ಯವಸ್ಥೆಗೆ ಜಿ.ಎಸ್.ಟಿ. ತೆರಿಗೆ ಪದ್ಧತಿ ಜಾರಿಗೆ ತಂದಿರುವುದು ಉತ್ತಮ ಉದಾಹರಣೆಯಾಗಿದೆ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಹೇಳಿದ್ದಾರೆ.

**ಸೈನ್ಯ ಹಿಂಪಡೆತ ಸುಗಮ : ಚೀನಾ**
ಬೀಜಿಂಗ್ : ಭಾರತ ಹಾಗೂ ಚೀನಾದ ಸೈನ್ಯಗಳ ನಡುವೆ ಇತ್ತೀಚೆಗೆ ಮಾಡಿಕೊಂಡಿರುವ ಒಪ್ಪಂದದ ಅನ್ವಯ, ಪೂರ್ವ ಲಡಾಕ್ ನಿಂದ ಸೈನ್ಯಗಳ ಹಿಂದಕ್ಕೆ ಕರೆಸುವುದು ಸುಗಮವಾಗಿ ನಡೆದಿದೆ ಎಂದು ಚೀನಾ ಹೇಳಿದೆ.

**ಫಿಲಿಪ್ಪೈನ್ಸ್ : ಚಂಡಮಾರುತದಿಂದ 115 ಸಾವು**
ಟ್ಯಾಲೆಸೆ: ಫಿಲಿಪ್ಪೈನ್ಸ್‌ಗೆ ಅಪ್ಪಳಿಸಿರುವ ಟಾಮಿ ಚಂಡಮಾರುತದ ಕಾರಣದಿಂದ 115 ಜನ ಸಾವನ್ನಪ್ಪಿದ್ದಾರೆ. ಹಲವರು ಅತಂತ್ರರಾಗಿದ್ದು, ರಕ್ಷಣೆಯ ನಿರೀಕ್ಷೆಯಲ್ಲಿದ್ದಾರೆ.ಫಿಲಿಪ್ಪೈನ್ಸ್‌ಗೆ ಈ ವರ್ಷ ಅಪ್ಪಳಿಸಿರುವ ಭೀಕರ ಚಂಡಮಾರುತಗಳಲ್ಲಿ ಟಾಮಿ ಸಹ ಒಂದಾಗಿದೆ. ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚಳವಾಗುವ ಕಳವಳ ಇದೆ.

## ಪಂಚಾಯತ್ ಕಟ್ಟಡಗಳ ನಿರ್ಮಾಣಕ್ಕೆ ಅಸ್ತು

ನವದೆಹಲಿ, ಅ. 26 - ಹೊಸ ಪಂಚಾಯತ್ ಕಟ್ಟಡಗಳ ನಿರ್ಮಾಣ, ಸಂಪನ್ಮೂಲ ಕೇಂದ್ರಗಳ ನಿರ್ಮಾಣ, ಈಗಿರುವ ಪಂಚಾಯತ್ ಕಟ್ಟಡಗಳ ಉನ್ನತೀಕರಣಕ್ಕೆ ಸಂಬಂಧಿಸಿದ ಹಲವು ಪ್ರಸ್ತಾವನೆಗಳಿಗೆ ಕೇಂದ್ರ ಪಂಚಾಯತ್ ರಾಜ್ ಸಚಿವಾಲಯ ಒಪ್ಪಿಗೆ ನೀಡಿದೆ.

ದೇಶಾದ್ಯಂತ ಪಂಚಾಯತ್ ಕಟ್ಟಡಗಳ ಉನ್ನತೀಕರಣಕ್ಕೆ ಒಪ್ಪಿಗೆ ನೀಡಲಾಗಿದೆ. ಅರುಣಾಚಲ ಪ್ರದೇಶದ ಗಡಿ ಭಾಗದಲ್ಲಿ 400 ಗ್ರಾಮ ಪಂಚಾಯಿತಿ ಕಟ್ಟಡಗಳ ನಿರ್ಮಾಣ ಪ್ರಸ್ತಾವನೆಗೆ ಒಪ್ಪಿಗೆ ನೀಡಲಾಗಿದೆ.

ಈಶಾನ್ಯದ ರಾಜ್ಯಗಳಲ್ಲಿ 1,633 ಗ್ರಾಮ ಪಂಚಾಯ್ತಿ ಭವನ ಹಾಗೂ 514 ಸಾಮಾನ್ಯ ಸೇವಾ ಕೇಂದ್ರಗಳನ್ನು ನಿರ್ಮಿಸಲು ಒಪ್ಪಿಗೆ ನೀಡಲಾಗಿದೆ.

ದೇಶದ ಹಲವು ರಾಜ್ಯಗಳಲ್ಲಿ 3,301 ಗ್ರಾಮ ಪಂಚಾಯಿತಿ ಭವನ ಹಾಗೂ ಸಾಮಾನ್ಯ ಸೇವಾ ಕೇಂದ್ರಗಳನ್ನು ನಿರ್ಮಿಸುವ ಪ್ರಸ್ತಾವನೆಗೂ ಒಪ್ಪಿಗೆ ನೀಡಲಾಗಿದೆ.




## ಸಮಾಜದ ತೊಡಕು ತಿದ್ದಲು ಜಾನಪದ ಸಾಹಿತ್ಯದಿಂದ ಸಾಧ್ಯ

ದಾವಣಗೆರೆ, ಅ.26- ಸಮಾಜದಲ್ಲಿನ ತೊಡಕುಗಳನ್ನು ಸರಿಪಡಿಸಲು ಜಾನಪದ ಸಾಹಿತ್ಯ ಸಹಾಯಕವಾಗಿದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಯುಗಧರ್ಮ ಪ್ರತಿಷ್ಠಾನದ ವತಿಯಿಂದ ನಗರದ ಕುವೆಂಪು ಕನ್ನಡ ಭವನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಯುಗಧರ್ಮ ಪ್ರತಿಷ್ಠಾನದ ಉದ್ಘಾಟನೆ ಹಾಗೂ ಯುಗಧರ್ಮ ರಾಮಣ್ಣ ವಿರಚಿತ 6 ಕೃತಿಗಳ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಯುಗಧರ್ಮ ರಾಮಣ್ಣನವರು ಜಾನಪದ ಸಾಹಿತ್ಯಕ್ಕೆ ಅತ್ಯದ್ಭುತ ಕೊಡುಗೆ ನೀಡಿದ್ದಾರೆ. ಹಾಗಾಗಿ ಇವರ ಪ್ರತಿಭೆಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ವೇದಿಕೆ ಸೃಷ್ಟಿಸಬೇಕು ಎಂದು ಹೇಳಿದರು.

ಕಲೆ ಮತ್ತು ಸಾಹಿತ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿದಾಗ ಮಾತ್ರ ಉತ್ತಮ ವಾತಾವರಣ ಸೃಷ್ಟಿಸಬಹುದು. ಈ ನಿಟ್ಟಿನಲ್ಲಿ ರಾಜ್ಯದ ಪ್ರತಿ ತಾಲ್ಲೂಕು ಮಟ್ಟದಲ್ಲಿ ಕಲಾಭಿಮಾನಿಗಳನ್ನು ಸೇರಿಸಿ ಅವರಲ್ಲಿ ಕಲಾಸಕ್ತಿ ಮೂಡಿಸುವ ಪ್ರತಿಷ್ಠಾನದ ಕಾರ್ಯಕ್ಕೆ ಜನಪ್ರತಿನಿಧಿಯಾಗಿ ಬೆಂಬಲಿಸುವುದಾಗಿ ಸಂಸದರು ತಿಳಿಸಿದರು.

### ಧಾರ್ಮಿಕ ಕಾರ್ಯಕ್ರಮಗಳಲ್ಲಿ ಡಿಜೆ ಬೇಡ..!

**ಗಣಪತಿ ಹಬ್ಬದಲ್ಲಿ ದೇವರ ವಿಗ್ರಹ ವಿಸರ್ಜನೆಗೆ ಮುಹೂರ್ತ ನೋಡುವ ಸ್ವರೂಪ ಬದಲಾಗಿದೆ. ಡಿಜೆ ಲಭಿಸುವ ದಿನವೇ ಗಣಪನ ವಿಗ್ರಹ ವಿಸರ್ಜಿಸುವ ಮುಹೂರ್ತ ಆಗಬಾರದು. ಹಬ್ಬಗಳಲ್ಲಿ ದೇಶದ ಕಲೆ ಹಾಗೂ ಸಾಹಿತ್ಯಕ್ಕೆ ಪ್ರಾತಿನಿಧ್ಯ ಕೊಡಬೇಕಿದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.**

ಕಳೆದ ವರ್ಷ ರಾಜ್ಯೋತ್ಸವದ ಅಂಗವಾಗಿ ಇಲ್ಲಿನ ಗಾಜಿನ ಮನೆಯಲ್ಲಿ 8 ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮ ನಡೆದಿದ್ದವು. ಅದೇ ರೀತಿ ಈ ಬಾರಿಯೂ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಬಗ್ಗೆ ಯೋಜನೆ ರೂಪಿಸಲಿದ್ದೇವೆ ಎಂದು ಹೇಳಿದರು.

ಜಗಳೂರು ಶಾಸಕ ಬಿ. ದೇವೇಂದ್ರ ಮಾತನಾಡಿ, ಮನುಷ್ಯನಿಗೆ ಬೇಕಿರುವುದು ದೇಶದ ಹಿರಿಮೆ-ಗರಿಮೆ ಹಾಗೂ ಸಂಸ್ಕೃತಿ ಸಂಸ್ಕಾರ. ಇದನ್ನು ಅರಿತು ಬದುಕಿದರೆ ಎಲ್ಲರ ಬಾಳು ಬಂಗಾರವಾಗಲಿದೆ ಎಂದು ಹೇಳಿದರು.

ಸಂಸದರು ಮತ್ತು ಶಾಸಕರ ಅನುದಾನದಲ್ಲಿ ಪ್ರತಿಷ್ಠಾನಕ್ಕೆ ಕಾನೂನಾತ್ಮಕ ವಾಗಿ ಕೊಡಬಹುದಾದ್ದನ್ನು ಕೊಡುತ್ತೇವೆ. ಆದರೆ, ವೈಯಕ್ತಿಕವಾಗಿ ನನ್ನಿಂದ ಈ ಪ್ರತಿಷ್ಠಾನಕ್ಕೆ 1 ಲಕ್ಷ ರೂ. ಹಣ ದತ್ತಿಯಾಗಿ ನೀಡುತ್ತೇನೆ ಎಂದರು.

ಇದೇ ವೇಳೆ ಚಿಕ್ಕಜಾಜೂರಿನ ಎಸ್. ಎಂ.ಆರ್. ವರದಿಗಾರ ಮಹೇಂದ್ರಪ್ಪನವರಿಗೆ ಪ್ರಥಮ ವರ್ಷದ 'ಯುಗಧರ್ಮ ಪ್ರಶಸ್ತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಅಧ್ಯಕ್ಷ ಡಾ. ರಾಧಾಕೃಷ್ಣ ಪಲ್ಲಕ್ಕಿ, ಕಸಾಪ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ಡಾ. ಜಗನ್ನಾಥ್ ಕೆ. ಡಾಂಗೆ, ದಾದಾಪೀರ್ ನವಿಲೇಹಾಳ್, ಬರಹಗಾರ ಧನಂಜಯಪ್ಪ, ಕೆ.ಆರ್. ಮಂಜುನಾಥ್ ಮತ್ತಿತರರಿದ್ದರು.

## ನಗರದಲ್ಲಿ ಇಂದು ಹಿರಿಯ ನಾಗರಿಕರ ದಿನಾಚರಣೆ

ವನಿತಾ ಸಮಾಜ, 'ಆಶ್ರಯ' ಹಿರಿಯ ವನಿತೆಯರ ಆನಂದ ಧಾಮ ಹಾಗೂ 'ವಾತ್ಸಲ್ಯ' ಹಿರಿಯ ವನಿತೆಯರ ವಸತಿ ನಿಲಯ ಇವರ ಸಂಯುಕ್ತಾಶ್ರಯದಲ್ಲಿ ಇಂದು ಸಂಜೆ 5.30ಕ್ಕೆ 'ಆಶ್ರಯ' ಹಿರಿಯ ವನಿತೆಯರ ಆನಂದಧಾಮ (ವೃದ್ಧಾಶ್ರಮ) ದಲ್ಲಿ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ದೃಷ್ಟಿ ಕಣ್ಣಿನ ಆಸ್ಪತ್ರೆಯ ನೇತ್ರ ತಜ್ಞ ಡಾ.ರವೀಂದ್ರನಾಥ್, ದಾವಣಗೆರೆ-ಹರಿಹರ ಅರ್ಬನ್ ಸಹಕಾರ ಬ್ಯಾಂಕ್ ಅಧ್ಯಕ್ಷ ಎನ್.ಎ. ಮುರುಗೇಶ್, ಸ್ತ್ರೀರೋಗ ತಜ್ಞರಾದ ಡಾ. ರಶ್ಮಿ ಸುಬೋಧ್ ಶೆಟ್ಟಿ, ಅಖಿಲ ಕರ್ನಾಟಕ ಜೈನ ಮಹಿಳಾ ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ಪದ್ಮ ಪ್ರಕಾಶ್ ಆಗಮಿಸಲಿದ್ದಾರೆ. ಆಶ್ರಯದ ಅಧ್ಯಕ್ಷರಾದ ಶ್ರೀಮತಿ ಸುನಿತ ವೀರನಾರಾಯಣ ಅಧ್ಯಕ್ಷತೆ ವಹಿಸಲಿದ್ದಾರೆ.

## ಹಸಿರು ಪಟಾಕಿ ಮಾರಾಟ ಕಡ್ಡಾಯಕ್ಕೆ ಪರಿಸರ, ವನ್ಯಜೀವಿ ಸಂರಕ್ಷಣಾ ವೇದಿಕೆ ಒತ್ತಾಯ

ದಾವಣಗೆರೆ, ಅ. 26- ಅಪಾಯಕಾರಿ ಹಾಗೂ ಮಾಲಿನ್ಯಕಾರಕ ಪಟಾಕಿಗಳ ಬದಲು ಹಸಿರು ಪಟಾಕಿಗಳ ಮಾರಾಟಕ್ಕೆ ಜಿಲ್ಲಾಧಿಕಾರಿಗಳು ಅನುಮತಿ ನೀಡಬೇಕೆಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಒತ್ತಾಯಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೇದಿಕೆ ಅಧ್ಯಕ್ಷ ಎಸ್.ಟಿ.ನವೀನ್ ಕುಮಾರ್ ಮಾತನಾಡಿ, ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆಯಿಂದ ಅಪಾಯಕಾರಿ ಪಟಾಕಿಗಳ ಮಾರಾಟ ತಡೆಯಲು ಸರ್ಕಾರಕ್ಕೆ ಮನವಿ ಮಾಡಿದ್ದೇವೆ ಎಂದರು.

ಆದರೂ ಹಳೆಯ ಪಟಾಕಿಗಳನ್ನು ಸ್ಟಾಕ್ ಮಾಡಿ ಸರ್ಕಾರಿ ನಿಯಮಗಳನ್ನು ಉಲ್ಲಂಘಿಸಿ ಮಾರಾಟ ಮಾಡಿದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಅಂತಹ ಮಳಿಗೆಯನ್ನು ಸೀಜ್ ಮಾಡಬೇಕೆಂದು ಆಗ್ರಹಿಸಿದರು.

ಅಲ್ಲದೇ ಹಸಿರು ಪಟಾಕಿ ಹೊರತುಪಡಿಸಿ ಬೇರೆ ಪಟಾಕಿಗಳನ್ನು ಮಾರಾಟ ಮಾಡಿದರೆ ಅವುಗಳನ್ನು ವಶಪಡಿಸಿಕೊಳ್ಳಲು ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಅಗ್ನಿಶಾಮಕ ಇಲಾಖೆ, ಮಾಲಿನ್ಯ ನಿಯಂತ್ರಣ ಮಂಡಳಿ, ಆರೋಗ್ಯ ಇಲಾಖೆಯ ಅಧಿಕಾರಿಗಳ ಜೊತೆಯಲ್ಲಿ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆಯ ಪದಾಧಿಕಾರಿಗಳೊಂದಿಗೆ ಸಭೆ ನಡೆಸಲು ನಿರ್ಧರಿಸಲಾಗಿದೆ ಎಂದರು.

ವೇದಿಕೆ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್ ಮಾತನಾಡಿ, ಸಾಮಾನ್ಯ ಪಟಾಕಿಯಿಂದ ಮಾಲಿನ್ಯ ಹೆಚ್ಚಾಗುತ್ತದೆ. ಹಸಿರು ಪಟಾಕಿ ಮಾಲಿನ್ಯವನ್ನು ಕಡಿಮೆ ಮಾಡುತ್ತದೆ.

ಸಾಮಾನ್ಯ ಪಟಾಕಿಗಿಂತ ಹಸಿರು ಪಟಾಕಿಗಳು ಭಿನ್ನವಾಗಿವೆ. ಹಸಿರು ಪಟಾಕಿಗಳನ್ನು ನ್ಯಾಷನಲ್ ಎನ್ವಿರಾನ್ಮೆಂಟಲ್ ಇಂಜಿನಿಯರಿಂಗ್ ರಿಸರ್ಚ್ ಇನ್‌ಸ್ಟಿಟ್ಯೂಟ್ ಆವಿಷ್ಕರಿಸಿದೆ. ಆದ್ದರಿಂದ ಪರಿಸರಕ್ಕೆ ಹಾನಿಯಾಗದಂತೆ ಹಸಿರು ಪಟಾಕಿ ಮಾರಾಟ ಮಾಡಬೇಕೆಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವೇದಿಕೆ ಪದಾಧಿಕಾರಿಗಳಾದ ಟಿ. ರುದ್ರಮುನಿ, ಎನ್. ತಿಪ್ಪೇಸ್ವಾಮಿ, ಅಜಯ್ ಕುಮಾರ್, ಎನ್. ಕೆ.ಕೊಟ್ರೇಶ್ ಉಪಸ್ಥಿತರಿದ್ದರು.

**ವನ್ಯಹ ಜೀವಿಗಳಿಗೆ ಸಂಚಕಾರ :** ಪರಿಸರದ ಮೇಲೆ ಯಾರೇ ಅತ್ಯಾಚಾರ ಮಾಡಿದರೂ ಅವರಿಗೆ ಕಾನೂನು ತಕ್ಕ ಶಿಕ್ಷೆ ನೀಡುತ್ತದೆ. ಎಂಬುದಕ್ಕೆ ಕಾರವಾರ ಶಾಸಕ ಸತೀಶ ಸೈಲ್ ಬಂಧನವೇ ಸಾಕ್ಷಿ ಎಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಅಧ್ಯಕ್ಷ ನವೀನ್ ಕುಮಾರ್ ಹೇಳಿದರು.

ಇನ್ನೂ ಅನೇಕ ರಾಜಕಾರಣಿಗಳು ಇದರಲ್ಲಿದ್ದು, ನ್ಯಾಯಾಂಗ ಪರಿಶೀಲಿಸಬೇಕೆಂದು ಮನವಿ ಮಾಡಿದರು.

ಅಕ್ರಮ ಗಣಿಗಾರಿಕೆಯೂ ಅರಣ್ಯ ನಾಶವನ್ನು ಮಾಡುತ್ತಿದೆ. ಇದರಿಂದ ವನ್ಯಜೀವಿಗಳಿಗೆ ಸಂಚಕಾರ ಬಂದಿದ್ದು, ಪ್ರಾಣಿ, ಮಾನವ ಸಂಘರ್ಷ ನಿತ್ಯ ನಡೆಯುತ್ತಿದೆ ಎಂದರು.






KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas